ತುಂಗ ಬಿಂಬ
ಸತ್ಯ ಮತ್ತು ಧೈರ್ಯದ ಧ್ವನಿ
TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಭಾರತ ಮಹಿಳಾ ಕ್ರಿಕೆಟ್ ತಂಡದ ನಾಯಕಿ ಹರ್ಮನ್‌ಪ್ರೀತ್ ಕೌರ್‌ಗೆ 1 ಕೋಟಿ ರೂ ಬಹುಮಾನ ಘೋಷಿಸಿದ ಭಗವಂತ್ ಮಾನ್!



ಸಂಪುಟ: 04 Vol: | ಸಂಚಿಕೆ: 94 Issue: | ರಾಯಚೂರು Raichur | 26-09-2026 | ಶನಿವಾರ Saturday | ಪುಟ: 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685

# ವಾಣಿಜ್ಯ ಹಡಗುಗಳ ಮೇಲಿನ ದಾಳಿಗಳಿಗೆ ಕಡಿವಾಣ ಅಗತ್ಯ: ಜೈಶಂಕರ್

ವಿಶ್ವಸಂಸ್ಥೆ: ಗಲ್ಫ್, ಕೆಂಪು ಸಮುದ್ರ, ಕಪ್ಪು ಸಮುದ್ರ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ವಾಣಿಜ್ಯ ಹಡಗುಗಳು ಮತ್ತು ಸಮುದ್ರಯಾನಿಕರ ಮೇಲೆ ಪದೇಪದೆ ನಡೆಯುತ್ತಿರುವ ದಾಳಿಗಳನ್ನು ವಿದೇಶಾಂಗ ಸಚಿವ ಎಸ್. ಜೈಶಂಕರ್ ತೀವ್ರವಾಗಿ ಖಂಡಿಸಿದ್ದು, ಸಮುದ್ರಯಾನದ ಸುರಕ್ಷತೆಗೆ ಅಂತರರಾಷ್ಟ್ರೀಯ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂದು ಹೇಳಿದ್ದಾರೆ.

81ನೇ ವಿಶ್ವಸಂಸ್ಥೆ ಸಾಮಾನ್ಯ ಸಭೆಯ ಹಿನ್ನೆಲೆಯಲ್ಲಿ ನಡೆದ ಹಡಗುಗಳು ಮತ್ತು ಸಮುದ್ರಯಾನಿಕರ ಸುರಕ್ಷತೆ ಕುರಿತ ಸಚಿವ ಮಟ್ಟದ ಸಭೆಯಲ್ಲಿ ಮಾತನಾಡಿದ ಅವರು, ಇತ್ತೀಚಿನ ತಿಂಗಳುಗಳಲ್ಲಿ ವಾಣಿಜ್ಯ ಹಡಗುಗಳ ಮೇಲಿನ ದಾಳಿಗಳು ಹೆಚ್ಚುತ್ತಿದ್ದು, ಇದರಿಂದ ಜಾಗತಿಕ ವ್ಯಾಪಾರಕ್ಕೆ ಅಡ್ಡಿಯಾಗುವುದರ ಜೊತೆಗೆ ಅಮಾಯಕ ನಾವಿಕರ ಜೀವಕ್ಕೂ ಅಪಾಯ ಎದುರಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು. 81ನೇ ವಿಶ್ವಸಂಸ್ಥೆ ಸಾಮಾನ್ಯ ಸಭೆಯ ಉನ್ನತ ಮಟ್ಟದ ಅಧಿವೇಶನ ನ್ಯೂಯಾರ್ಕ್‌ನಲ್ಲಿ ನಡೆಯುತ್ತಿದೆ.



ಇತ್ತೀಚೆಗೆ ಓಮನ್ ಸಮೀಪ ದಾಳಿಗೊಳಗಾದ ಆಂಟಿಗುವಾ ಮತ್ತು ಬಾರ್ಬುಡಾ ಧ್ವಜದ ಎಂವಿ ಕೇಪ್ ದಾವೋ ಹಡಗಿನ ಘಟನೆಯನ್ನು ಉಲ್ಲೇಖಿಸಿದ ಅವರು, ಇಂತಹ ದಾಳಿಗಳು ನಿಲ್ಲಬೇಕು ಎಂದು ಹೇಳಿದರು. ಈ ದಾಳಿಯಲ್ಲಿ ಭಾರತೀಯ ಸಮುದ್ರಯಾನಿಕರೊಬ್ಬರು ಮೃತಪಟ್ಟಿದ್ದು, ಉಳಿದ ಭಾರತೀಯ ಸಿಬ್ಬಂದಿಯನ್ನು ಸುರಕ್ಷಿತವಾಗಿ ತೆರವುಗೊಳಿಸಲಾಗಿದೆ.

ಸಮುದ್ರ ಮಾರ್ಗಗಳಲ್ಲಿ ಉಂಟಾಗುತ್ತಿರುವ ಸಂಘರ್ಷ ಮತ್ತು ಭದ್ರತಾ ಸಮಸ್ಯೆಗಳ ಪರಿಣಾಮವಾಗಿ ನಾವಿಕರು ಹಡಗುಗಳಲ್ಲೇ ದೀರ್ಘಕಾಲ ಉಳಿಯಬೇಕಾದ ಪರಿಸ್ಥಿತಿ ಎದುರಾಗುತ್ತಿದೆ. ಸಿಬ್ಬಂದಿ ಬದಲಾವಣೆ, ಸ್ವದೇಶಕ್ಕೆ ವಾಪಸ್ ಕಳುಹಿಸುವಿಕೆ ಹಾಗೂ ಕುಟುಂಬದವರೊಂದಿಗೆ ಸಂಪರ್ಕದಲ್ಲಿಯೂ ತೊಂದರೆ ಉಂಟಾಗಿ, ನಾವಿಕರು ಮಾನಸಿಕ ಒತ್ತಡ ಎದುರಿಸುತ್ತಿದ್ದಾರೆ ಎಂದು ಜೈಶಂಕರ್ ಹೇಳಿದರು.

ಹಡಗುಗಳು ಮತ್ತು ಸಮುದ್ರಯಾನಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ಭಾರತ ಮತ್ತು ಲೈಬೀರಿಯಾ ಸಹಯೋಗದಲ್ಲಿ ರಾಷ್ಟ್ರಗಳನ್ನು ಒಂದೇ ವೇದಿಕೆಗೆ ತರುವ ಪ್ರಯತ್ನ ನಡೆಯುತ್ತಿದೆ. ಪ್ರಮುಖ ಹಡಗು ನೋಂದಣಿ ರಾಷ್ಟ್ರಗಳು, ಹಡಗು ಮಾಲೀಕ ರಾಷ್ಟ್ರಗಳು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ನಾವಿಕರನ್ನು ಒದಗಿಸುವ ದೇಶಗಳ ನಡುವೆ ಸಮನ್ವಯ ಹೆಚ್ಚಿಸುವುದು ಅಗತ್ಯ ಎಂದು ಅವರು ಪ್ರತಿಪಾದಿಸಿದರು.

ಸಮುದ್ರಯಾನಿಕರಿಗೆ ತುರ್ತು ಸಂದರ್ಭಗಳಲ್ಲಿ ನೆರವು ಒದಗಿಸಲು ಸಮುದ್ರ ಪ್ರಾಧಿಕಾರಗಳು ಮತ್ತು ರಾಯಭಾರ ಕಚೇರಿಗಳ ನಡುವೆ ಪರಿಣಾಮಕಾರಿ ಸಂಪರ್ಕ ವ್ಯವಸ್ಥೆ ರೂಪಿಸುವ ಅಗತ್ಯವಿದೆ. ವೈದ್ಯಕೀಯ ನೆರವು, ಕುಟುಂಬದವರೊಂದಿಗೆ ಸಂಪರ್ಕ ಹಾಗೂ ತುರ್ತು ಸ್ಥಳಾಂತರದಂತಹ ಸೌಲಭ್ಯಗಳು ನಾವಿಕರಿಗೆ ತ್ವರಿತವಾಗಿ ದೊರೆಯಬೇಕು ಎಂದು ಹೇಳಿದರು.

ಹೋರ್ಮುಜ್ ಜಲಸಂಧಿ, ಓಮನ್ ಕೊಲ್ಲಿ, ಕೆಂಪು ಸಮುದ್ರ, ಏಡನ್ ಕೊಲ್ಲಿ, ಬಾಬ್-ಎಲ್-ಮಂದೇಬ್ ಹಾಗೂ ಕಪ್ಪು ಸಮುದ್ರ ಸೇರಿದಂತೆ ಹಲವು ಪ್ರದೇಶಗಳಲ್ಲಿ ವಾಣಿಜ್ಯ ಹಡಗುಗಳಿಗೆ ಭದ್ರತಾ ಅಪಾಯ ಹೆಚ್ಚಿರುವ ಹಿನ್ನೆಲೆಯಲ್ಲಿ ಭಾರತವು ಭಾರತೀಯ ಹಡಗುಗಳು ಮತ್ತು ಭಾರತೀಯ ನಾವಿಕರಿರುವ ವಿದೇಶಿ ಹಡಗುಗಳಿಗೆ ಹಲವು ಸುರಕ್ಷತಾ ಸಲಹೆಗಳನ್ನು ಹೊರಡಿಸಿದೆ.

ವಾಣಿಜ್ಯ ಹಡಗುಗಳು, ಸಮುದ್ರಯಾನಿಕರು ಮತ್ತು ನಾಗರಿಕ ಮೂಲಸೌಕರ್ಯಗಳ ಮೇಲಿನ ದಾಳಿಗಳು ಕೊನೆಗೊಳ್ಳಬೇಕು ಹಾಗೂ ಅಂತರರಾಷ್ಟ್ರೀಯ ಜಲಮಾರ್ಗಗಳಲ್ಲಿ ಮುಕ್ತ ಮತ್ತು ಅಡೆತಡೆಯಿಲ್ಲದ ನೌಕಾಯಾನವನ್ನು ಖಚಿತಪಡಿಸಬೇಕು ಎಂಬುದು ಭಾರತದ ನಿಲುವಾಗಿದೆ.

## ರಾಯಚೂರುಯಾದಗಿರಿ ಕ್ಷೇತ್ರದ ರೈಲ್ವೆ ಯೋಜನೆಗಳಿಗೆ ವೇಗ ನೀಡಲು ಸಂಸದ ಕುಮಾರ ನಾಯಕ ಮನವಿ

ಹುಬ್ಬಳ್ಳಿ: ರಾಯಚೂರುಯಾದಗಿರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಪ್ರಮುಖ ರೈಲ್ವೆ ಯೋಜನೆಗಳ ಅನುಷ್ಠಾನಕ್ಕೆ ಚುರುಕು ನೀಡುವ ಸಂಬಂಧ ಸಂಸದ ಜಿ. ಕುಮಾರ ನಾಯಕ ಅವರು ನೈಋತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕ ಪಿ. ಅನಂತ್ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದರು.



ಹುಬ್ಬಳ್ಳಿಯ ನೈಋತ್ಯ ರೈಲ್ವೆ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಕ್ಷೇತ್ರದ ರೈಲ್ವೆ ಮೂಲಸೌಕರ್ಯ ಅಭಿವೃದ್ಧಿ, ಪ್ರಗತಿಯಲ್ಲಿರುವ ಕಾಮಗಾರಿಗಳು ಹಾಗೂ ಹೊಸ ಮಾರ್ಗಗಳ ಸಮೀಕ್ಷೆ ಸೇರಿದಂತೆ ಹಲವು ವಿಷಯಗಳನ್ನು ಸಂಸದರು ಹಿರಿಯ ಅಧಿಕಾರಿಗಳ ಗಮನಕ್ಕೆ ತಂದರು.

ರಾಯಚೂರುಗಿಣಿಗೇರಾ ರೈಲು ಮಾರ್ಗದ ಪ್ರಸ್ತುತ ಕಾಮಗಾರಿಯ ಸ್ಥಿತಿಗತಿ ಕುರಿತು ಮಾಹಿತಿ ಪಡೆದ ಅವರು, ಬಾಕಿ ಉಳಿದಿರುವ ಕಾಮಗಾರಿಗಳನ್ನು ವಿಳಂಬವಿಲ್ಲದೆ ಕೈಗೆತ್ತಿಕೊಂಡು ಪೂರ್ಣಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ಕೋರಿದರು. ಇದೇ ವೇಳೆ ಗದಗವಾಡಿ ರೈಲು ಮಾರ್ಗದ ಕಾಮಗಾರಿಗೂ ಹೆಚ್ಚಿನ ಆದ್ಯತೆ ನೀಡಿ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಪ್ರಸ್ತಾವಿತ ಆಲಮಟ್ಟಿಯಾದಗಿರಿ ರೈಲು ಮಾರ್ಗದ ಅಂತಿಮ ಸ್ಥಳ ಸಮೀಕ್ಷೆ (FLS) ಕಾರ್ಯವನ್ನು ಗುತ್ತಿಗೆದಾರರ ಮೂಲಕ ಶೀಘ್ರ ಆರಂಭಿಸುವ ಅಗತ್ಯವಿದೆ ಎಂದು ಸಂಸದರು ಪ್ರತಿಪಾದಿಸಿದರು. ಈ ಯೋಜನೆಯ ಮುಂದಿನ 2ನೇ ಪುಟಕ್ಕೆ

## ಭಯೋತ್ಪಾದನೆ ಪ್ರಶ್ನೆಗೆ ಪಾಕ್ ಪತ್ರಕರ್ತನಿಗೆ ಜೈಶಂಕರ್ ತೀಕ್ಷ್ಣ ಪ್ರತಿಕ್ರಿಯೆ

ನ್ಯೂಯಾರ್ಕ್: ವಿಶ್ವಸಂಸ್ಥೆ ಸಾಮಾನ್ಯ ಸಭೆಯ ಹಿನ್ನೆಲೆಯಲ್ಲಿ ನಡೆದ ಮಾಧ್ಯಮ ಸಂವಾದದಲ್ಲಿ ಭಯೋತ್ಪಾದನೆಗೆ ಸಂಬಂಧಿಸಿದ ಪ್ರಶ್ನೆ ಕೇಳಿದ ಪಾಕಿಸ್ತಾನದ ಪತ್ರಕರ್ತನಿಗೆ ವಿದೇಶಾಂಗ ಸಚಿವ ಎಸ್. ಜೈಶಂಕರ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಘಟನೆ ಶುಕ್ರವಾರ ನಡೆದಿದೆ.



ವಿಶ್ವಸಂಸ್ಥೆಯ ಕೇಂದ್ರ ಕಚೇರಿಯಲ್ಲಿ ಜೈಶಂಕರ್ ಹಾಗೂ ಲೈಬೀರಿಯಾದ ವಿದೇಶಾಂಗ ಸಚಿವೆ ಸಾರಾ ಬೇಸೊಲೊ ನ್ಯಾಂತಿ ಅವರು ಹಡಗುಗಳು ಮತ್ತು ಸಮುದ್ರಯಾನಿಕರ ಸುರಕ್ಷತೆ ಹಾಗೂ ಭದ್ರತೆ ಕುರಿತ ಸ್ನೇಹಿತರ ಗುಂಪು ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡುತ್ತಿದ್ದ ವೇಳೆ ಪಾಕಿಸ್ತಾನದ ಪತ್ರಕರ್ತನೊಬ್ಬ, "ಪಾಕಿಸ್ತಾನದಲ್ಲಿ ಭಯೋತ್ಪಾದನೆಗೆ ಪ್ರಾಯೋಜಕತ್ವ ನೀಡುವುದನ್ನು ನಿಮ್ಮ ಸರ್ಕಾರ ಯಾವಾಗ ನಿಲ್ಲಿಸುತ್ತದೆ?" ಎಂದು ಪ್ರಶ್ನಿಸಿದರು.

ಇದಕ್ಕೆ ಜೈಶಂಕರ್, "ಭಯೋತ್ಪಾದಕ 2ನೇ ಪುಟಕ್ಕೆ

## ಮಂತ್ರಾಲಯ ಶ್ರೀಮಠದಲ್ಲಿ ಶ್ರದ್ಧಾಭಕ್ತಿಯಿಂದ ಅನಂತ ಚತುರ್ದಶಿ ವ್ರತಾಚರಣೆ

ಮಂತ್ರಾಲಯ: ಪವಿತ್ರ ಅನಂತ ಚತುರ್ದಶಿ ಅಂಗವಾಗಿ ಮಂತ್ರಾಲಯದ ಶ್ರೀಮಠದಲ್ಲಿ ಭಕ್ತಿಭಾವ ಹಾಗೂ ಧಾರ್ಮಿಕ ಸಂಭ್ರಮದೊಂದಿಗೆ ಅನಂತ ಚತುರ್ದಶಿ ವ್ರತಾಚರಣೆ ನೆರವೇರಿತು.



ಶ್ರೀಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಶ್ರೀಮೂಲ ರಾಮದೇವರ ಪೂಜೆಯ ಸಂದರ್ಭದಲ್ಲಿ ಅನಂತ ಚತುರ್ದಶಿ ವ್ರತವನ್ನು ಶಾಸ್ತ್ರೋಕ್ತವಾಗಿ ನೆರವೇರಿಸಿದರು. ಈ ವೇಳೆ ಶ್ರೀಮೂಲ ರಾಮದೇವರು ಸೇರಿದಂತೆ ಶ್ರೀಮಠದ ಆರಾಧ್ಯ ದೇವರಿಗೆ ವಿಶೇಷ ಪೂಜೆ, ಅರ್ಚನೆ ಹಾಗೂ ಮಂಗಳಾರತಿ ಸಲ್ಲಿಸಲಾಯಿತು.

ಅನಂತ ಚತುರ್ದಶಿಯ ಪವಿತ್ರ ದಿನದ ಅಂಗವಾಗಿ ಶ್ರೀಪಾದಂಗಳವರು ವಿಶೇಷ ಪೂಜಾ ಕೈಂಕರ್ಯಗಳನ್ನು ನೆರವೇರಿಸಿ, ಲೋಕಕಲ್ಯಾಣ ಹಾಗೂ ಸಕಲ ಭಕ್ತರ ಸುಖ-ಶಾಂತಿ, ಸಮೃದ್ಧಿಗಾಗಿ ಪ್ರಾರ್ಥಿಸಿದರು. ಶ್ರೀಮಠದ ಆವರಣದಲ್ಲಿ ಬೆಳಗ್ಗೆಯಿಂದಲೇ ಧಾರ್ಮಿಕ ವಾತಾವರಣ ಮನೆಮಾಡಿದ್ದು, ಪೂಜಾ ಕಾರ್ಯಕ್ರಮಗಳು ಭಕ್ತರ ಗಮನ ಸೆಳೆದವು.

ಶ್ರೀಮೂಲ ರಾಮದೇವರ ಪೂಜೆ ಹಾಗೂ ಅನಂತ ಚತುರ್ದಶಿ ವ್ರತಾಚರಣೆಯನ್ನು ಕಣ್ತುಂಬಿಕೊಳ್ಳಲು ಆಗಮಿಸಿದ್ದ ಭಕ್ತರು ಭಕ್ತಿಭಾವದಿಂದ ಪಾಲ್ಗೊಂಡು ದೇವರ ದರ್ಶನ ಹಾಗೂ ಶ್ರೀಪಾದಂಗಳವರ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಶ್ರೀಮಠದ ಆಡಳಿತಾಧಿಕಾರಿಗಳು, ಸಿಬ್ಬಂದಿ, ಪಂಡಿತರು, ಅರ್ಚಕರು ಹಾಗೂ ವಿವಿಧೆಡೆಯಿಂದ ಆಗಮಿಸಿದ್ದ ಭಕ್ತರು ಉಪಸ್ಥಿತರಿದ್ದರು.

## ರೈತರ ಬೆಳೆನಷ್ಟಕ್ಕೆ ಪರಿಹಾರ, ಸಮರ್ಪಕ ನೀರು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯ

ರಾಯಚೂರು: ಜಿಲ್ಲೆಯಲ್ಲಿ ಮುಂಗಾರು ಮಳೆ ತೀವ್ರ ಅಭಾವದಿಂದ ಭೀಕರ ಬರಗಾಲ ಉಂಟಾಗಿದ್ದು, ರೈತರು ಬೆಳೆ ನಷ್ಟದಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರ ಸಮಸ್ಯೆಗಳಿಗೆ ಸರ್ಕಾರ ಕೂಡಲೇ ಸ್ಪಂದಿಸಿ ಸೂಕ್ತ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಗೌರವಾಧ್ಯಕ್ಷ ಚಾಮರಾಸ ಮಾಲಿಪಾಟೀಲ ಒತ್ತಾಯಿಸಿದರು.



ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳಿಗೆ ತೀವ್ರ ಹಿನ್ನಡೆಯಾಗಿದ್ದು, ರೈತರು ಬಿತ್ತಿದ ತೊಗರಿ, ಹತ್ತಿ, ಭತ್ತ, ಸಜ್ಜೆ ಸೇರಿದಂತೆ ವಿವಿಧ ಬೆಳೆಗಳು ಸಮರ್ಪಕ ಮಳೆಯಿಲ್ಲದೆ ನಷ್ಟವಾಗಿವೆ. ಇಂತಹ ಪರಿಸ್ಥಿತಿಯಲ್ಲಿ ರೈತರ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿದರು.

ರೈತರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಘಟಕದ ವತಿಯಿಂದ ಸೆ.28ರಂದು ಬೆಳಿಗ್ಗೆ 10 ಗಂಟೆಗೆ ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿ ಎದುರು ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ 178 ತಾಲೂಕುಗಳಲ್ಲಿ ಬರಗಾಲದ ಪರಿಸ್ಥಿತಿ ಕಂಡುಬಂದಿದ್ದರೂ, 101 ತಾಲೂಕುಗಳನ್ನು ಮಾತ್ರ ಬರಗಾಲ ಪೀಡಿತವೆಂದು ಘೋಷಿಸಲಾಗಿದೆ. ರೈತರ ಬೆಳೆನಷ್ಟವನ್ನು ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಿ, ನಷ್ಟಕ್ಕೊಳಗಾದ ರೈತರಿಗೆ ಸಮರ್ಪಕ ಪರಿಹಾರ ವಿತರಿಸಬೇಕು. ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಒದಗಿಸಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬರಗಾಲವೆಂದು ಘೋಷಣೆ ಮಾಡಿದ ಪ್ರದೇಶಗಳಲ್ಲಿ ರೈತರ ಬೆಳೆನಷ್ಟಕ್ಕೆ ಪರಿಹಾರ ನೀಡುವುದರ ಜೊತೆಗೆ ರೈತರ ಖಾತೆಗೆ ತಕ್ಷಣ ಪರಿಹಾರದ ಹಣ ಜಮಾ ಮಾಡಬೇಕು. ಧನಕರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು.

ತುಂಗಭದ್ರಾ ಎಡದಂಡೆ ಹಾಗೂ ನಾರಾಯಣಪುರ 2ನೇ ಪುಟಕ್ಕೆ

## ವಾಸವಿ ಗಜಾನನ ಉತ್ಸವ ಸಮಿತಿಯಿಂದ ಅದ್ದೂರಿ 39ನೇ ಗಣೇಶ ವಿಸರ್ಜನಾ ಮಹೋತ್ಸವ

ರಾಯಚೂರು, ಸೆ.25: ನಗರದ ವಾಸವಿ ಗಜಾನನ ಉತ್ಸವ ಸಮಿತಿ ವತಿಯಿಂದ 39ನೇ ವರ್ಷದ ಗಣೇಶೋತ್ಸವದ ಅಂಗವಾಗಿ ಗಣೇಶ ಮೂರ್ತಿಯ ವಿಸರ್ಜನಾ ಮಹೋತ್ಸವ ಭಕ್ತಿಭಾವ ಹಾಗೂ ಸಂಭ್ರಮದಿಂದ ನಡೆಯಿತು. ಸಂಗೀತ, ನೃತ್ಯ ಮತ್ತು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ನಡುವೆ ಗಣೇಶನಿಗೆ ಅದ್ದೂರಿ ಬೀಳ್ಕೊಡುಗೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ಸಚಿವ ಕೆ. ಶಿವನಗೌಡ ನಾಯಕ್, ಸಮಾಜದ ಪ್ರಗತಿಗೆ ಒಗ್ಗಟ್ಟು ಮತ್ತು ಪರಸ್ಪರ ಸಹಕಾರ ಅತ್ಯಂತ ಮುಖ್ಯವಾಗಿದೆ. ಹಬ್ಬ-ಹರಿದಿನಗಳು ನಮ್ಮ ಸಂಸ್ಕೃತಿ, ಸಂಪ್ರದಾಯ ಹಾಗೂ ಸಾಮಾಜಿಕ ಬಾಂಧವ್ಯವನ್ನು ಗಟ್ಟಿಗೊಳಿಸುತ್ತವೆ. ಯುವಜನರು ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಿ ಉಳಿಸುವ ಜವಾಬ್ದಾರಿ ವಹಿಸಬೇಕು ಎಂದು ಹೇಳಿದರು.



ಗಣೇಶೋತ್ಸವದ ಅಂಗವಾಗಿ ಆಯೋಜಿಸಿದ್ದ ಸಂಗೀತ ಮತ್ತು ನೃತ್ಯ ಕಾರ್ಯಕ್ರಮಗಳು ಸಾರ್ವಜನಿಕರ ಗಮನ ಸೆಳೆದವು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಉತ್ಸವದ ಸಂಭ್ರಮವನ್ನು ಹೆಚ್ಚಿಸಿದರು.

ಉತ್ಸವದ ಅಂಗವಾಗಿ ನಡೆದ ಹರಾಜಿನಲ್ಲಿ ಬಂಗಾರದ ನಾಣ್ಯವನ್ನು ₹1.25 ಲಕ್ಷಕ್ಕೆ ಲಕ್ಷ್ಮೀನಾರಾಯಣ ಪಡೆದುಕೊಂಡರು. ಗಣೇಶನ ಲಡ್ಡುವನ್ನು ₹1.10 ಲಕ್ಷಕ್ಕೆ ಟೈಗರ್ ಸಣ್ಣಬಾಬು, ಬೆಳ್ಳಿ ಜನಿವಾರವನ್ನು ₹90 ಸಾವಿರಕ್ಕೆ ಕುಸುಮೂರ್ತಿ ಪ್ರದೀಪ್ ಹಾಗೂ ಬೆಳ್ಳಿ ನಾಣ್ಯವನ್ನು ₹55 ಸಾವಿರಕ್ಕೆ ಅಭಿಷೇಕ್ ಗಣಧಾಳ್ ಪಡೆದುಕೊಂಡರು.

ಇದೇ ಸಂದರ್ಭದಲ್ಲಿ ಸಮಾಜದ ಹಿರಿಯರು, ಗಣ್ಯರು 2ನೇ ಪುಟಕ್ಕೆ

## ಬೆಳ್ಳಿ ಮಹೋತ್ಸವ ಸಂಭ್ರಮ: ಪತ್ರಕರ್ತರ ಕೇರಂ ಕ್ರೀಡಾಕೂಟಕ್ಕೆ ಚಾಲನೆ

ರಾಯಚೂರು: ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ಆಯೋಜಿಸಿರುವ ಕೇರಂ ಕ್ರೀಡಾಕೂಟಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯ ಬಸವರಾಜ ನಾಗಡದಿನ್ನಿ ಹಾಗೂ ನಿಕಟಪೂರ್ವ ರಾಜ್ಯ ಸಮಿತಿ ಸದಸ್ಯ ಶಿವಮೂರ್ತಿ ಹಿರೇಮಠ ಚಾಲನೆ ನೀಡಿದರು.

ನಗರದ ಪತ್ರಿಕಾ ಭವನದ ಮೇಲ್ಮಹಡಿ ಸಭಾಂಗಣದಲ್ಲಿ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ಚೀಟಿ ಎತ್ತುವ ಮೂಲಕ ಸ್ಪರ್ಧಿಗಳನ್ನು ಆಯ್ಕೆ ಮಾಡಿ, ಕೇರಂ ಆಡುವ ಮೂಲಕ ಪಂದ್ಯಾವಳಿಗೆ ಅಧಿಕೃತ ಚಾಲನೆ ನೀಡಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಬಸವರಾಜ ನಾಗಡದಿನ್ನಿ, ನಿತ್ಯವೂ ಸುದ್ದಿ ಸಂಗ್ರಹ ಹಾಗೂ ವರದಿಗಾರಿಕೆಯಲ್ಲಿ ನಿರತರಾಗಿರುವ ಪತ್ರಕರ್ತರಿಗೆ ಇಂತಹ ಕ್ರೀಡಾಕೂಟಗಳು ಹೊಸ ಉತ್ಸಾಹ ಮತ್ತು ಸ್ಫೂರ್ತಿ ತುಂಬುತ್ತವೆ. ಬೆಳ್ಳಿ ಮಹೋತ್ಸವದ ಹಿನ್ನೆಲೆಯಲ್ಲಿ ರಿಪೋರ್ಟರ್ಸ್ ಗಿಲ್ಡ್ ವಿವಿಧ ಅರ್ಥಪೂರ್ಣ ಚಟುವಟಿಕೆಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ ಎಂದರು.

ಶಿವಮೂರ್ತಿ ಹಿರೇಮಠ ಮಾತನಾಡಿ, ಬೆಳ್ಳಿ ಮಹೋತ್ಸವದ ಅಂಗವಾಗಿ ಕೇವಲ ಪತ್ರಕರ್ತರಿಗೆ ಮಾತ್ರವಲ್ಲದೆ ಪದವಿ ವಿದ್ಯಾರ್ಥಿಗಳಿಗೂ ವಿವಿಧ ಕಾರ್ಯಕ್ರಮಗಳಲ್ಲಿ ಅವಕಾಶ ಕಲ್ಪಿಸಿರುವುದು ಉತ್ತಮ ಬೆಳವಣಿಗೆಯಾಗಿದೆ. ಪತ್ರಕರ್ತರು ತಮ್ಮ ವೃತ್ತಿಪರ ಒತ್ತಡದ ನಡುವೆಯೂ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ದೈಹಿಕ ಹಾಗೂ ಮಾನಸಿಕ ಸಕ್ರಿಯತೆಗೆ ಸಹಕಾರಿಯಾಗುತ್ತದೆ. ಪತ್ರಕರ್ತರು ನಡೆದು ಬಂದ ಹಾದಿಯನ್ನು ನೆನಪಿಸುವ ಕಾರ್ಯಕ್ರಮಗಳನ್ನು ಆಯೋಜಿಸಿರುವುದು ಶ್ಲಾಘನೀಯವಾಗಿದ್ದು, ಎಲ್ಲರೂ ಒಗ್ಗಟ್ಟಿನಿಂದ ಬೆಳ್ಳಿ ಮಹೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್. ಗುರುನಾಥ್ ಮಾತನಾಡಿ, ಸದಾ ಸುದ್ದಿಯ ಹುಡುಕಾಟದಲ್ಲಿ ಕಾರ್ಯನಿರತರಾಗಿರುವ ಪತ್ರಕರ್ತರಲ್ಲಿ ಉತ್ಸಾಹ ಮೂಡಿಸಲು ಇಂತಹ ಕ್ರೀಡಾ ಚಟುವಟಿಕೆಗಳು ಸಹಕಾರಿಯಾಗುತ್ತವೆ. ನಗರದ ಎಲ್ಲ ಪತ್ರಕರ್ತರು ಉತ್ಸಾಹದಿಂದ ಕ್ರೀಡಾಕೂಟದಲ್ಲಿ 2ನೇ ಪುಟಕ್ಕೆ

## ಕನಿಷ್ಠ ವೇತನ, ಖಾಯಂ ನೇಮಕಾತಿಗೆ ಒತ್ತಾಯಿಸಿ ಶಾಸಕಿ ಕರಿಯಮ್ಮ ನಾಯಕ ಮನೆ ಮುಂದೆ ಪ್ರತಿಭಟನೆ

ದೇವದುರ್ಗ, ಸೆ.25: ಕನಿಷ್ಠ ವೇತನ ಜಾರಿ, ಹೊರಗುತ್ತಿಗೆ ಪದ್ಧತಿ ರದ್ದು, ಖಾಯಂ ನೇಮಕಾತಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಸಿಐಟಿಯು ನೇತೃತ್ವದಲ್ಲಿ ವಿವಿಧ ಇಲಾಖೆಗಳ ನೌಕರರು ಶುಕ್ರವಾರ ದೇವದುರ್ಗ ಶಾಸಕಿ ಕರಿಯಮ್ಮ ಜಿ. ನಾಯಕ ಅವರ ನಿವಾಸದ ಮುಂದೆ ಪ್ರತಿಭಟನೆ ನಡೆಸಿದರು.



ವಿಧಾನಸಭಾ ಅಧಿವೇಶನ ನಡೆಯುತ್ತಿರುವ ಹಿನ್ನೆಲೆಯಲ್ಲಿ ಶಾಸಕಿ ಕರಿಯಮ್ಮ ಜಿ. ನಾಯಕ ಅವರು ಬೆಂಗಳೂರಿನಲ್ಲಿ ಇದ್ದ ಕಾರಣ ಪ್ರತಿಭಟನಾ ಸ್ಥಳದಲ್ಲಿ ಹಾಜರಿರಲಿಲ್ಲ. ಪ್ರತಿಭಟನಾಕಾರರ ಮನವಿಯನ್ನು ಶಾಸಕರ ಪುತ್ರಿ ಗೌರಿ ಸ್ವೀಕರಿಸಿದರು.

ಈ ವೇಳೆ ಪ್ರತಿಭಟನಾ ಮುಖಂಡರೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಶಾಸಕಿ ಕರಿಯಮ್ಮ ನಾಯಕ, "ನಾನು ವಿಧಾನಸಭಾ ಅಧಿವೇಶನದಲ್ಲಿ ಇದ್ದೇನೆ. ನಿಮ್ಮ ಮನವಿ ಪತ್ರವನ್ನು ನನ್ನ ಮಗಳು ಗೌರಿಗೆ ನೀಡಿ. ನಿಮ್ಮ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತಂದು, ಅಧಿವೇಶನದಲ್ಲಿ ಪ್ರಸ್ತಾಪಿಸುತ್ತೇನೆ. ವಿಶೇಷವಾಗಿ ಎಲ್ಲ ಕಾರ್ಮಿಕರಿಗೆ ಕನಿಷ್ಠ ವೇತನ ಜಾರಿಯಾಗಬೇಕು ಎಂಬ ವಿಷಯದ ಕುರಿತು ನಿಮ್ಮ ಪರವಾಗಿ ಸರ್ಕಾರದ ಮೇಲೆ ಒತ್ತಡ ತರುತ್ತೇನೆ" ಎಂದು ಭರವಸೆ ನೀಡಿದರು.

ಸಿಐಟಿಯು ಜಿಲ್ಲಾ ಕಾರ್ಯಕಾರಿ ಮಂಡಳಿ ಸದಸ್ಯ ಗಿರಿಯಪ್ಪ ಪೂಜಾರಿ ಮಾತನಾಡಿ, ಹೊರಗುತ್ತಿಗೆ ನೌಕರರಿಗೆ ಸೇವಾ ಭದ್ರತೆ ಕಲ್ಪಿಸಬೇಕು, ಕನಿಷ್ಠ ವೇತನ ಜಾರಿಗೊಳಿಸಬೇಕು, ಆಶಾ, ಅಂಗನವಾಡಿ, ಬಿಸಿಯೂಟ ಸೇರಿದಂತೆ ವಿವಿಧ ವಲಯಗಳ ನೌಕರರ ವೇತನ ಹೆಚ್ಚಿಸಬೇಕು ಹಾಗೂ ಇಎಸ್ಐ, ಪಿಎಫ್, 2ನೇ ಪುಟಕ್ಕೆ

# ಅ.1ರಿಂದ ಬಿಜೆಪಿಯ ಬೂತ್ ವಿಜಯ ಸಂಕಲ್ಪ ಯಾತ್ರೆ; 224 ಕ್ಷೇತ್ರ ತಲುಪುವ ಗುರಿ

ಬೆಂಗಳೂರು: ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ಹಾಗೂ 2028ರ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಪಕ್ಷದ ಸಂಘಟನೆಯನ್ನು ಬೂತ್ ಮಟ್ಟದಲ್ಲಿ ಬಲಪಡಿಸಲು ರಾಜ್ಯ ಬಿಜೆಪಿ ಬೂತ್ ವಿಜಯ ಸಂಕಲ್ಪ ಯಾತ್ರೆ ಹಮ್ಮಿಕೊಳ್ಳಲು ಸಜ್ಜಾಗಿದೆ. ಮೂರು ತಿಂಗಳ ಕಾಲ ರಾಜ್ಯಾದ್ಯಂತ ನಡೆಯಲಿರುವ ಯಾತ್ರೆಯ ಮೂಲಕ ಕಾರ್ಯಕರ್ತರನ್ನು ಸಕ್ರಿಯಗೊಳಿಸಿ, ಪ್ರತಿ ವಿಧಾನಸಭಾ ಕ್ಷೇತ್ರದಲ್ಲೂ ಸಂಘಟನಾ ಚಟುವಟಿಕೆಗಳಿಗೆ ಚುರುಕು ನೀಡುವುದು ಪಕ್ಷದ ಉದ್ದೇಶವಾಗಿದೆ.



ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಯಾತ್ರೆಯ ರೂಪುರೇಷೆಗಳನ್ನು ವಿವರಿಸಿದ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ, ಅಕ್ಟೋಬರ್ 1ರಂದು ಕೋಲಾರ ಜಿಲ್ಲೆಯ ಕುರುಡುಮಲೆ ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಯಾತ್ರೆಗೆ ಚಾಲನೆ ನೀಡಲಾಗುವುದು ಎಂದು ತಿಳಿಸಿದರು. ಮೊದಲ ಹಂತದಲ್ಲಿ ಅ.1ರಿಂದ 10ರವರೆಗೆ 16 ವಿಧಾನಸಭಾ ಕ್ಷೇತ್ರಗಳಲ್ಲಿ ಕಾರ್ಯಕ್ರಮ ನಡೆಯಲಿದ್ದು, ನಂತರ ಹಂತ ಹಂತವಾಗಿ ರಾಜ್ಯದ ಎಲ್ಲ 224 ವಿಧಾನಸಭಾ ಕ್ಷೇತ್ರಗಳಿಗೂ ವಿಸ್ತರಿಸಲಾಗುವುದು ಎಂದರು.

ಪ್ರತಿ ದಿನ ಎರಡು ವಿಧಾನಸಭಾ ಕ್ಷೇತ್ರಗಳಿಗೆ ಭೇಟಿ ನೀಡುವಂತೆ ಕಾರ್ಯಕ್ರಮ ರೂಪಿಸಲಾಗಿದ್ದು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಯಾತ್ರೆಯ ನೇತೃತ್ವ ವಹಿಸಲಿದ್ದಾರೆ. ಆಯಾ ಕ್ಷೇತ್ರಗಳಲ್ಲಿ ಪಕ್ಷದ ಸಂಘಟನಾ ಸ್ಥಿತಿಗತಿ ಪರಿಶೀಲಿಸುವುದರ ಜೊತೆಗೆ ಸ್ಥಳೀಯ ಮಟ್ಟದಲ್ಲಿ ಪಾದಯಾತ್ರೆ, ಸಾರ್ವಜನಿಕ ಸಭೆ ಹಾಗೂ ಪ್ರಮುಖ ಕಾರ್ಯಕರ್ತರೊಂದಿಗೆ ಸಮಾಲೋಚನಾ ಸಭೆಗಳನ್ನು ನಡೆಸಲು ಯೋಜಿಸಲಾಗಿದೆ ಎಂದು ಪ್ರೀತಂ ಗೌಡ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಸಾರ್ವಜನಿಕ ಜೀವನದ 25 ವರ್ಷಗಳ ಹಿನ್ನೆಲೆಯಲ್ಲಿ ನಡೆಯುತ್ತಿರುವ ಸೇವಾ ಸಂಕಲ್ಪ ಕಾರ್ಯಕ್ರಮಗಳೊಂದಿಗೂ ಬೂತ್ ವಿಜಯ ಸಂಕಲ್ಪ ಯಾತ್ರೆಯನ್ನು ಸಮನ್ವಯಗೊಳಿಸಲಾಗುವುದು. ಸೇವಾ ಸಂಕಲ್ಪ ಕಾರ್ಯಕ್ರಮದಡಿ ವಿವಿಧ ಸೇವಾ ಮತ್ತು ಸಾರ್ವಜನಿಕ ಸಂಪರ್ಕ ಚಟುವಟಿಕೆಗಳನ್ನು ಬಿಜೆಪಿ ಈಗಾಗಲೇ ಆಯೋಜಿಸಿದೆ.

ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತದ ಕುರಿತು ಬಿಜೆಪಿ ಹೊಂದಿರುವ ಆಕ್ಷೇಪಗಳು, ಭ್ರಷ್ಟಾಚಾರದ ಆರೋಪಗಳು ಹಾಗೂ ಸ್ಥಳೀಯ ಸಮಸ್ಯೆಗಳನ್ನು ಯಾತ್ರೆಯ ಸಂದರ್ಭದಲ್ಲಿ ಜನರ ಮುಂದಿಡಲಾಗುವುದು ಎಂದು ಪ್ರೀತಂ ಗೌಡ ತಿಳಿಸಿದರು. ಇವು ಬಿಜೆಪಿಯ ರಾಜಕೀಯ ಆರೋಪಗಳಾಗಿದ್ದು, ಯಾತ್ರೆಯ ಮೂಲಕ ಪಕ್ಷದ ನಿಲುವುಗಳನ್ನು ಸಾರ್ವಜನಿಕರಿಗೆ ತಲುಪಿಸುವುದಾಗಿ ಅವರು ಹೇಳಿದರು.

ಇತ್ತೀಚಿನ ಬಳ್ಳಾರಿ ಚಲೋ ಕಾರ್ಯಕ್ರಮದ ಬಳಿಕ ಬಿಜೆಪಿ ಕೈಗೆತ್ತಿಕೊಳ್ಳುತ್ತಿರುವ ಮತ್ತೊಂದು ರಾಜ್ಯವ್ಯಾಪಿ ಸಂಘಟನಾ ಕಾರ್ಯಕ್ರಮ ಇದಾಗಿದ್ದು, ಮುಂದಿನ ಮೂರು ತಿಂಗಳಲ್ಲಿ ಎಲ್ಲ 224 ವಿಧಾನಸಭಾ ಕ್ಷೇತ್ರಗಳನ್ನು ತಲುಪಿ ಬೂತ್ ಮಟ್ಟದ ಸಂಘಟನೆಯನ್ನು ಚುರುಕುಗೊಳಿಸುವ ಗುರಿಯನ್ನು ಪಕ್ಷ ಹೊಂದಿದೆ.

# ರಾಷ್ಟ್ರ ನಿರ್ಮಾಣದಲ್ಲಿ ಮಹಿಳೆಯರು ಅಗ್ರಸ್ಥಾನ ಪಡೆಯಲಿ: ಆಂಜನೇಯ

ರಾಯಚೂರು: ದೇಶದ ಏಕತೆ, ಸಮಗ್ರತೆ ಹಾಗೂ ಸಂಸ್ಕೃತಿಯ ಸಂರಕ್ಷಣೆಗೆ ಯುವ ಸಮುದಾಯದ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಇಂದಿನ ಸಮಾನತೆಯ ಯುಗದಲ್ಲಿ ಮಹಿಳೆಯರು ರಾಷ್ಟ್ರ ನಿರ್ಮಾಣದಲ್ಲಿ ಅಗ್ರಸ್ಥಾನ ಪಡೆಯಬೇಕು ಎಂದು ಶ್ರೀ ರಾಮಕೃಷ್ಣ ಪರಮಹಂಸ ಎಜುಕೇಶನ್ ಟ್ರಸ್ಟ್ ಸಂಸ್ಥಾಪಕ ಆಂಜನೇಯ ಹೇಳಿದರು.



ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಆಯೋಜಿಸಿದ್ದ ಎನ್‌ಎಸ್‌ಎಸ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಇಂದು ಎಲ್ಲ ಕ್ಷೇತ್ರಗಳಲ್ಲೂ ಸಾಧನೆ ಮಾಡುತ್ತಿದ್ದು, ಶಿಕ್ಷಣದ ಜೊತೆಗೆ ಸೇವಾ ಮನೋಭಾವ ಮತ್ತು ವ್ಯಕ್ತಿತ್ವ ವಿಕಾಸಕ್ಕೂ ಆದ್ಯತೆ ನೀಡಬೇಕು. ಕಾಲೇಜಿನ ವಿದ್ಯಾರ್ಥಿನಿಯರು ಎನ್‌ಎಸ್‌ಎಸ್ ಮೂಲಕ ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವುದು ಶ್ಲಾಘನೀಯ ಎಂದರು.

ಮುಖ್ಯ ಅತಿಥಿಯಾಗಿದ್ದ ಮಟಮಾರಿಯ ಶ್ರೀ ಮಹಾಂತೇಶ ಕರ್ನಾಟಕ ಪಬ್ಲಿಕ್ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ನಾಗಪ್ಪ ಹಿರೇದೊಡ್ಡಿ ಮಾತನಾಡಿ, ಹೆಣ್ಣುಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಎನ್‌ಎಸ್‌ಎಸ್ ಮೂಲಕ ನಾಯಕತ್ವ ಮತ್ತು ಸೇವಾ ಸಾಮರ್ಥ್ಯ ಬೆಳೆಸುವಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಉತ್ತಮ ಕಾರ್ಯ ಮಾಡುತ್ತಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿನಿಯರಿಗೆ ಹಲವು ಅವಕಾಶಗಳನ್ನು ಎನ್‌ಎಸ್‌ಎಸ್ ಕಲ್ಪಿಸುತ್ತಿದ್ದು, ಅವುಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲೆ ಡಾ. ಸುಗುಣಾ ಬಸವರಾಜ್ ಮಾತನಾಡಿ, ಎನ್‌ಎಸ್‌ಎಸ್ ಸಂಸ್ಥಾಪನಾ ದಿನವು ಸೇವೆಯ ಸಾರ್ಥಕತೆಯನ್ನು ಸ್ಮರಿಸುವುದರ ಜೊತೆಗೆ ನಮ್ಮ ಜವಾಬ್ದಾರಿಗಳನ್ನು ಮನನ ಮಾಡಿಕೊಳ್ಳುವ ದಿನವಾಗಿದೆ. ಹಿಂದಿನ ಸೇವಾ ಚಟುವಟಿಕೆಗಳ ಅನುಭವದ ಆಧಾರದಲ್ಲಿ ಮುಂದಿನ ಕಾರ್ಯಯೋಜನೆ ರೂಪಿಸಿಕೊಂಡು ಕಿರಿಯ ವಿದ್ಯಾರ್ಥಿನಿಯರನ್ನು ಪ್ರೇರೇಪಿಸುವುದು ಇದರ ಉದ್ದೇಶ ಎಂದು ಹೇಳಿದರು.

ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಡಾ. ಸಂತೋಷಕುಮಾರ ರೇವೂರ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರತಿ ವರ್ಷ ಸೆ.24ರಂದು ರಾಷ್ಟ್ರೀಯ ಸೇವಾ ಯೋಜನೆಯ ಸಂಸ್ಥಾಪನಾ ದಿನವನ್ನು ಆಚರಿಸಲಾಗುತ್ತದೆ. ಕಾಲೇಜಿನ ಎನ್‌ಎಸ್‌ಎಸ್ ಘಟಕವು ದಶಮಾನೋತ್ಸವದ ಸಂಭ್ರಮದಲ್ಲಿದ್ದು, ಘಟಕದ ಹಿನ್ನೆಲೆ, ಸಾಧನೆ, ಕಾರ್ಯಚಟುವಟಿಕೆಗಳು ಹಾಗೂ ಅವಕಾಶಗಳ ಕುರಿತು ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಎನ್‌ಎಸ್‌ಎಸ್ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಎನ್‌ಎಸ್‌ಎಸ್ ಸ್ವಯಂಸೇವಕಿಯಾಗಿ ಸೇವೆ ಸಲ್ಲಿಸಿ ಉನ್ನತ ಶಿಕ್ಷಣ ಪೂರೈಸಿ ಪ್ರಸ್ತುತ ಸಹಾಯಕ ಪ್ರಾಧ್ಯಾಪಕಿಯಾಗಿ ಕಾರ್ಯನಿರ್ವಹಿಸುತ್ತಿರುವ ಅಶ್ವಿನಿ ಹೂಗಾರ ಹಾಗೂ ಉಪನ್ಯಾಸಕಿ ಶ್ರೀದೇವಿ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪತಂಜಲಿ ಯೋಗ ಶಿಕ್ಷಕ ವೀರಭದ್ರಪ್ಪ, ಸಿಬ್ಬಂದಿ ಕಾರ್ಯದರ್ಶಿ ಡಾ. ಎಸ್. ಆರ್. ಪರ್ವೀನ್, ಐಕ್ಯೂಎಸಿ ಸಹ ಸಂಯೋಜಕ ಶರಣಗೌಡ ಸೇರಿದಂತೆ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಸಂಗೀತಾ ವಿ. ನಿರೂಪಿಸಿದರು, ಜಮುನಾ ಪ್ರಾರ್ಥಿಸಿದರು, ಜಮುಲಮ್ಮ ಸ್ವಾಗತಿಸಿ, ಅನ್ನಪೂರ್ಣಾ ವಂದಿಸಿದರು.

# ದೇವದುರ್ಗ ಹುಟ್ಟುವಳಿ ಮಾರಾಟ ಸಹಕಾರ ಸಂಘಕ್ಕೆ ₹4.84 ಲಕ್ಷ ನಿವ್ವಳ ಲಾಭ

ದೇವದುರ್ಗ: ದೇವದುರ್ಗ ತಾಲೂಕ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘವು 2025-26ನೇ ಸಾಲಿನಲ್ಲಿ ₹4,84,408.36 ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಶರಣಗೌಡ ಪಿ. ಮದರಕಲ್ ತಿಳಿಸಿದರು.



ಪಟ್ಟಣದ ಸಂಘದ ಕಚೇರಿಯಲ್ಲಿ ನಡೆದ 67ನೇ ವಾರ್ಷಿಕ ಮಹಾಸಭೆಯಲ್ಲಿ ವಾರ್ಷಿಕ ವರದಿ ಮಂಡಿಸಿ ಮಾತನಾಡಿದ ಅವರು, 2026ರ ಮಾರ್ಚ್ 31ರ ಅಂತ್ಯಕ್ಕೆ ಸಂಘವು ಒಟ್ಟು 1,279 ಸದಸ್ಯರನ್ನು ಹೊಂದಿದ್ದು, ₹22,13,057 ಪಾಲು ಬಂಡವಾಳ ಹೊಂದಿದೆ ಎಂದರು.

ಸಂಘದ ಪಾಲು ಬಂಡವಾಳದಲ್ಲಿ ಅ ವರ್ಗದ 12 ಸದಸ್ಯರಿಂದ ₹2,21,695, ಬ ವರ್ಗದ 1,243 ಸದಸ್ಯರಿಂದ ₹10,62,005, ಕ ವರ್ಗದ 23 ಸದಸ್ಯರಿಂದ ₹5,007 ಹಾಗೂ ಡ ವರ್ಗದ ಒಬ್ಬ ಸದಸ್ಯರಿಂದ ₹9,24,350 ಸಂಗ್ರಹವಾಗಿದೆ ಎಂದು ವಿವರಿಸಿದರು.

2025-26ನೇ ಸಾಲಿನಲ್ಲಿ ಪಡಿತರ ಚಿಲ್ಲರೆ ವ್ಯವಹಾರದಲ್ಲಿ ₹77,54,320.98 ವಹಿವಾಟು ನಡೆಸಲಾಗಿದೆ. ಅಂತ್ಯೋದಯ ಕಾರ್ಡ್‌ದಾರರಿಗೆ ಆಹಾರ ಧಾನ್ಯ ವಿತರಣೆ ಕಾರ್ಯವನ್ನೂ ಸಮರ್ಪಕವಾಗಿ ನಿರ್ವಹಿಸಲಾಗಿದೆ ಎಂದು ತಿಳಿಸಿದರು.

ಸಂಘದ ಸ್ವಂತ ಲಾಭದ ಹಣದಲ್ಲಿ ಆವರಣದಲ್ಲಿ 12 ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಿ ಬಾಡಿಗೆಗೆ ನೀಡಲಾಗಿದ್ದು, ಇದರಿಂದ ಸಂಘಕ್ಕೆ ನಿರಂತರ ಆದಾಯದ ಮೂಲ ಸೃಷ್ಟಿಯಾಗಿದೆ. ಸಂಘದ ಆದಾಯವನ್ನು ಮತ್ತಷ್ಟು ಹೆಚ್ಚಿಸುವ ಉದ್ದೇಶದಿಂದ ಹೆಚ್ಚುವರಿಯಾಗಿ 10 ವಾಣಿಜ್ಯ ಮಳಿಗೆಗಳ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ಜಮಾ-ಖರ್ಚು ಪತ್ರಿಕೆಯಂತೆ ಆರ್‌ಡಿಸಿಸಿ ಬ್ಯಾಂಕ್ ಉಳಿತಾಯ ಖಾತೆ, ಎಸ್‌ಬಿಐ ಚಾಲ್ತಿ ಖಾತೆ ಹಾಗೂ ಕೆಎಸ್‌ಸಿಸಿ ಲಿಮಿಟೆಡ್ ರಾಯಚೂರು ಸೇರಿದಂತೆ ವಿವಿಧ ಖಾತೆಗಳ ಮೂಲಕ ಸಂಘದ ಹಣಕಾಸು ವ್ಯವಹಾರಗಳನ್ನು ನಿಯಮಾನುಸಾರ ನಡೆಸಲಾಗುತ್ತಿದೆ. ಲೆಕ್ಕಪರಿಶೋಧನಾ ವರದಿಗೆ ಸಂಬಂಧಿಸಿದಂತೆ ಸಂಪೂರ್ಣ ಪಾಲನಾ ವರದಿಯನ್ನೂ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಎಲ್ಲ ಸದಸ್ಯರಿಗೆ ಷೇರು ಪ್ರಮಾಣಪತ್ರ ವಿತರಣೆ, ಮೀಸಲು ನಿಧಿಗೆ ಸಂಬಂಧಿಸಿದ ನಿಯಮಗಳ ಪಾಲನೆ ಹಾಗೂ ಸಹಕಾರ ಶಿಕ್ಷಣ ನಿಧಿ ಪಾವತಿ ಸೇರಿದಂತೆ ಅಗತ್ಯ ಅನುಪಾಲನಾ ಕ್ರಮಗಳನ್ನು ಕ್ರಮಬದ್ಧವಾಗಿ ಕೈಗೊಳ್ಳಲಾಗುವುದು ಎಂದು ಆಡಳಿತ ಮಂಡಳಿ ತಿಳಿಸಿತು.

ಸಂಘದ ಅಭಿವೃದ್ಧಿಗೆ ಸಹಕಾರ ನೀಡಿದ ಗುಲಬರ್ಗಾ ಪ್ರಾಂತದ ಜಂಟಿ ನಿಬಂಧಕರು, ಉಪನಿಬಂಧಕರು, ಸಹಾಯಕ ನಿಬಂಧಕರು ಹಾಗೂ ರಾಯಚೂರು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಅಧಿಕಾರಿಗಳಿಗೆ ಅಧ್ಯಕ್ಷ ಶರಣಗೌಡ ಪಿ. ಮದರಕಲ್ ಮತ್ತು ವ್ಯವಸ್ಥಾಪಕ ಶರಣಬಸವ ವಿ. ಬಳೆ ಕೃತಜ್ಞತೆ ಸಲ್ಲಿಸಿದರು.

ರಾಜ್ಯ ಸರ್ಕಾರ ನೀಡುವ ಪಾಲು ಹಣಕ್ಕೆ ಸರಿಸಮನಾಗಿ ಸಂಘದ ಸದಸ್ಯರಿಂದಲೂ ಪಾಲು ಬಂಡವಾಳ ಸಂಗ್ರಹಿಸಬೇಕಿರುವುದರಿಂದ, ಸದಸ್ಯರು ಹೆಚ್ಚಿನ ಪಾಲು ಹಣ ನೀಡಿ ಸಂಘದ ಆರ್ಥಿಕ ಬಲವರ್ಧನೆ ಮತ್ತು ಅಭಿವೃದ್ಧಿಗೆ ಸಹಕರಿಸಬೇಕು ಎಂದು ಶರಣಗೌಡ ಪಿ. ಮದರಕಲ್ ಮನವಿ ಮಾಡಿದರು.

ಸಭೆಯಲ್ಲಿ ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಎ. ರಾಜಶೇಖರ ನಾಯಕ, ಸಂಘದ ನಿರ್ದೇಶಕರಾದ ಶರಣಗೌಡ ಕಮತಗಿ, ಪ್ರಕಾಶ ಪಾಟೀಲ್, ಮಲ್ಲಯ್ಯ ಬಿ. ಗಣೇಕಲ್, ಶಿವುಕುಮಾರ ಅಕ್ಕರಿಕಿ, ಪಿ. ಶರಣಪ್ಪ ಪರತಪುರ, ಪರ್ವತರೆಡ್ಡಿ ಪಾಟೀಲ್ ಶಾವಂತಗೇರಾ, ಸತೀಶ ಬಂಡೇಗುಡ್ಡ, ಚನ್ನವೀರಯ್ಯಸ್ವಾಮಿ ಅರಕೇರಾ, ನರಸಣ್ಣ ನಾಯಕ ಗಣಜಲಿ, ವ್ಯವಸ್ಥಾಪಕ ಶರಣಬಸವ ವಿ. ಬಳೆ, ಸಿಬ್ಬಂದಿಗಳಾದ ಸರಸ್ವತಿ ಎಸ್. ಹಿರೇಮಠ, ಮಂಜುನಾಥ, ಅಕ್ತರ ಹುಸೇನ್, ಗಂಗಣ್ಣ ಸೇರಿದಂತೆ ಸಂಘದ ಸದಸ್ಯರು ಭಾಗವಹಿಸಿದ್ದರು.


## ಅಮೃತ ವಾಣಿ

ತೆರೆದ ಕಿಟಕಿ ಮನೆಯ ಬೆಳಕಿಗೆ
ತೆರೆದ ಪುಸ್ತಕ ಮನದ ಬೆಳಕಿಗೆ.


## 1597 ನೇಯ ದಿನಕ್ಕೆ ಏಮ್ಸ್ ಹೋರಾಟ

# ಸಿಇಸಿ ಜ್ಞಾನೇಶ್ ಕುಮಾರ್ ವಜಾ, ಎಸ್‌ಐಆರ್ ಸ್ಥಗಿತಕ್ಕೆ ಸಿಪಿಐ(ಎಂಎಲ್) ಲಿಬರೇಶನ್ ಆಗ್ರಹ

ರಾಯಚೂರು: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ಸ್ಥಗಿತಗೊಳಿಸಬೇಕು ಹಾಗೂ ಮತದಾರರ ಪಟ್ಟಿಯಿಂದ ತಪ್ಪಾಗಿ ಕೈಬಿಡಲಾದ ಅರ್ಹ ಮತದಾರರ ಹೆಸರುಗಳನ್ನು ಮರುಸೇರ್ಪಡೆ ಮಾಡಬೇಕು ಎಂದು ಒತ್ತಾಯಿಸಿ ಸಿಪಿಐ(ಎಂಎಲ್) ಲಿಬರೇಶನ್ ಪಕ್ಷದ ತಾಲೂಕು ಸಮಿತಿ ವತಿಯಿಂದ ನಗರದ ಟಿಪ್ಪು ಸುಲ್ತಾನ್ ಉದ್ಯಾನದ ಮುಂಭಾಗದಲ್ಲಿ ಪ್ರತಿಭಟನೆ ನಡೆಸಲಾಯಿತು.




ಸೆ.23ರಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ಪ್ರಕಟಿಸಿದ ವರದಿಯನ್ನು ಉಲ್ಲೇಖಿಸಿದ ಪ್ರತಿಭಟನಾಕಾರರು, ಮೂವರು ಸದಸ್ಯರ ಚುನಾವಣಾ ಆಯೋಗದಲ್ಲಿನ ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಕಳೆದ 10 ತಿಂಗಳಲ್ಲಿ ಕನಿಷ್ಠ 14 ಸಂದರ್ಭಗಳಲ್ಲಿ ಮತದಾರರ ಸೇರ್ಪಡೆ, ಹೆಸರುಗಳ ಅಳಿಸುವಿಕೆ, ಎಸ್‌ಐಆರ್ ಹಾಗೂ ಮತದಾರರ ದತ್ತಾಂಶ ನಿರ್ವಹಣೆಗೆ ಸಂಬಂಧಿಸಿದ ಕ್ರಮಗಳ ಬಗ್ಗೆ ಲಿಖಿತ ಆಕ್ಷೇಪಗಳನ್ನು ದಾಖಲಿಸಿದ್ದಾರೆ ಎಂದು ಹೇಳಿದರು.

ಮತದಾರರ ದತ್ತಾಂಶವನ್ನು ಕೇಂದ್ರೀಕರಿಸುವುದು ಹಾಗೂ ರಾಜ್ಯ ಮತ್ತು ಕ್ಷೇತ್ರಮಟ್ಟದ ಅಧಿಕಾರಿಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸುವ ಕುರಿತು ಇಬ್ಬರು ಆಯುಕ್ತರು ಆತಂಕ ವ್ಯಕ್ತಪಡಿಸಿದ್ದಾರೆ ಎಂಬ ವರದಿಯನ್ನು ಉಲ್ಲೇಖಿಸಿದ ಪ್ರತಿಭಟನಾಕಾರರು, ಇಂತಹ ಬೆಳವಣಿಗೆಗಳು ಚುನಾವಣಾ ಆಯೋಗದ ಕಾರ್ಯವೈಖರಿಯ ಪಾರದರ್ಶಕತೆ ಕುರಿತು ಪ್ರಶ್ನೆಗಳನ್ನು ಹುಟ್ಟುಹಾಕುತ್ತವೆ ಎಂದು ಆರೋಪಿಸಿದರು.

ಎಸ್‌ಐಆರ್ ಪ್ರಕ್ರಿಯೆಯು ಕೇವಲ ಮತದಾರರ ಪಟ್ಟಿಯ ಪರಿಷ್ಕರಣೆಗೆ ಸೀಮಿತವಾಗಿಲ್ಲ; ಅರ್ಹ ನಾಗರಿಕರ ಮತದಾನದ ಹಕ್ಕಿನೊಂದಿಗೆ ನೇರವಾಗಿ ಸಂಬಂಧಿಸಿದೆ. ಆದ್ದರಿಂದ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಹಾಗೂ ತಪ್ಪಾಗಿ ಕೈಬಿಡಲಾದ ಮತದಾರರ ಹೆಸರುಗಳನ್ನು ಮರುಸ್ಥಾಪಿಸಬೇಕು ಎಂದು ಪಕ್ಷದ ಮುಖಂಡರು ಒತ್ತಾಯಿಸಿದರು.

ಚುನಾವಣಾ ಆಯೋಗದ ಸ್ವತಂತ್ರತೆ ಮತ್ತು ವಿಶ್ವಾಸಾರ್ಹತೆಯನ್ನು ಕಾಪಾಡಬೇಕು. ಚುನಾವಣಾ ಆಯುಕ್ತರ ನೇಮಕಾತಿಗೆ ಪ್ರಧಾನಮಂತ್ರಿ, ಲೋಕಸಭೆ ವಿರೋಧ ಪಕ್ಷದ ನಾಯಕ ಹಾಗೂ ಭಾರತದ ಮುಖ್ಯ ನ್ಯಾಯಮೂರ್ತಿಯನ್ನು ಒಳಗೊಂಡ ಆಯ್ಕೆ ಸಮಿತಿ ವ್ಯವಸ್ಥೆ ಜಾರಿಗೊಳಿಸಬೇಕು ಎಂಬ ಬೇಡಿಕೆಯನ್ನೂ ಪ್ರತಿಭಟನಾಕಾರರು ಮುಂದಿಟ್ಟರು.

ಇನ್ನೊಂದೆಡೆ, ಚುನಾವಣಾ ಆಯೋಗವು ಸೆ.23ರಂದು ನೀಡಿದ ಸ್ಪಷ್ಟೀಕರಣದಲ್ಲಿ, ಆಯೋಗದೊಳಗಿನ ಲಿಖಿತ ಅಭಿಪ್ರಾಯಗಳು, ತಾಂತ್ರಿಕ ಸಲಹೆಗಳು ಮತ್ತು ಆಕ್ಷೇಪಗಳು ಆಂತರಿಕ ಪರಿಶೀಲನಾ ಪ್ರಕ್ರಿಯೆಯ ಭಾಗವಾಗಿದ್ದು, ಎಸ್‌ಐಆರ್ ಸೇರಿದಂತೆ ಅಂತಿಮ ನಿರ್ಧಾರಗಳು ಪೂರ್ಣ ಆಯೋಗದ ಸರ್ವಾನುಮತದಿಂದ ಕೈಗೊಳ್ಳಲಾಗಿದೆ ಎಂದು ತಿಳಿಸಿದೆ.

ಪ್ರತಿಭಟನೆಯಲ್ಲಿ ಪಕ್ಷದ ತಾಲೂಕು ಕಾರ್ಯದರ್ಶಿ ಅಜೀಜ್ ಜಾಗೀರ್ದಾರ್, ಮುಖಂಡರಾದ ಭೀಮಯ್ಯ, ಖಾದರ್ ಅಹ್ಮದ್, ನಿಸಾರ್, ಜಗದೀಶ್, ಮಹೇಂದ್ರ, ಹನೀಫ್ ಅಬಕಾರಿ, ಎಲ್ಲಪ್ಪ, ವೀರೇಶ್, ಸಣ್ಣ ನರಸಪ್ಪ, ಮಾರಣ್ಣ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಮೊದಲನೇ ಪುಟದಿಂದ

# ರಾಯಚೂರುಯಾದಗಿರಿ ಕ್ಷೇತ್ರದ ರೈಲ್ವೆ ಯೋಜನೆಗಳಿಗೆ ವೇಗ ನೀಡಲು ಸಂಸದ ಕುಮಾರ ನಾಯಕ ಮನವಿ

ಆಡಳಿತಾತ್ಮಕ ಹಾಗೂ ತಾಂತ್ರಿಕ ಪ್ರಕ್ರಿಯೆಗಳಿಗೆ ವೇಗ ನೀಡುವಂತೆಯೂ ಅಧಿಕಾರಿಗಳಿಗೆ ಮನವಿ ಮಾಡಿದರು.

ಇದರೊಂದಿಗೆ ರೈಲ್ವೆ ಗೂಡ್ಸ್ ಶೆಡ್ ಸ್ಥಳಾಂತರದ ವಿಷಯವೂ ಸಭೆಯಲ್ಲಿ ಚರ್ಚೆಗೆ ಬಂದಿತು. ಗೂಡ್ಸ್ ಶೆಡ್ ಸ್ಥಳಾಂತರದಿಂದ ರೈಲ್ವೆ ಕಾರ್ಯಾಚರಣೆ, ಸರಕು ಸಾಗಣೆ ಹಾಗೂ ಸ್ಥಳೀಯ ಸಾರ್ವಜನಿಕರಿಗೆ ಆಗಬಹುದಾದ ಪರಿಣಾಮಗಳ ಕುರಿತು ಅಧಿಕಾರಿಗಳೊಂದಿಗೆ ವಿಚಾರ ವಿನಿಮಯ ನಡೆಸಲಾಯಿತು.

ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ರೈಲ್ವೆ ಕಾಮಗಾರಿಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬವಾಗದಂತೆ ನಿಯಮಿತ ಮೇಲ್ವಿಚಾರಣೆ ನಡೆಸಬೇಕು. ಯೋಜನೆಗಳಿಗೆ ಸಂಬಂಧಿಸಿದ ಅನುಮೋದನೆ, ತಾಂತ್ರಿಕ ಪ್ರಕ್ರಿಯೆ ಹಾಗೂ ಇತರ ಅಗತ್ಯ ಕ್ರಮಗಳನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಬೇಕು ಎಂದು ಕುಮಾರ ನಾಯಕ ಕೋರಿದರು.

ಸಭೆಯಲ್ಲಿ ಪ್ರಸ್ತಾಪಿಸಲಾದ ವಿಷಯಗಳಿಗೆ ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳು ಸ್ಪಂದಿಸಿದ್ದು, ವಿವಿಧ ಯೋಜನೆಗಳ ಕಾಮಗಾರಿಗೆ ಚುರುಕು ನೀಡಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ರಾಯಚೂರು ಮತ್ತು ಯಾದಗಿರಿ ಭಾಗದಲ್ಲಿ ರೈಲ್ವೆ ಸಂಪರ್ಕ ವಿಸ್ತರಣೆಯಿಂದ ಪ್ರಯಾಣಿಕರಿಗೆ ಉತ್ತಮ ಸಾರಿಗೆ ಸೌಲಭ್ಯ ದೊರೆಯುವುದರ ಜತೆಗೆ ಕೃಷಿ ಉತ್ಪನ್ನಗಳ ಸಾಗಣೆ, ಕೈಗಾರಿಕೆ ಮತ್ತು ವ್ಯಾಪಾರ ಚಟುವಟಿಕೆಗಳಿಗೂ ಅನುಕೂಲವಾಗಲಿದೆ. ಪ್ರಮುಖ ರೈಲ್ವೆ ಯೋಜನೆಗಳು ಪೂರ್ಣಗೊಂಡರೆ ಈ ಭಾಗದ ಆರ್ಥಿಕ ಚಟುವಟಿಕೆ ಹಾಗೂ ಉದ್ಯೋಗಾವಕಾಶಗಳ ವಿಸ್ತರಣೆಗೆ ಸಹಕಾರಿಯಾಗಲಿದೆ ಎಂದು ಸಂಸದರು ಅಭಿಪ್ರಾಯಪಟ್ಟರು.

ರಾಯಚೂರುಯಾದಗಿರಿ ಲೋಕಸಭಾ ಕ್ಷೇತ್ರದಲ್ಲಿ ರೈಲ್ವೆ ಮೂಲಸೌಕರ್ಯವನ್ನು ಮತ್ತಷ್ಟು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ರೈಲ್ವೆ ಇಲಾಖೆ ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಬಾಕಿ ಯೋಜನೆಗಳ ಅನುಷ್ಠಾನಕ್ಕೆ ವೇಗ ನೀಡಲು ಪ್ರಯತ್ನ ಮುಂದುವರಿಸಲಾಗುವುದು ಎಂದು ಜಿ. ಕುಮಾರ ನಾಯಕ ತಿಳಿಸಿದರು.

ಸಭೆಯಲ್ಲಿ ಎಜಿಎಂ ಶ್ರೀನಿವಾಸ್, ಪ್ರಿನ್ಸಿಪಲ್ ಚೀಫ್ ಆಪರೇಷನ್ಸ್ ಆಫೀಸರ್ ಬಾಲಾಜಿ ಅರುಣ್ ಕುಮಾರ್, ಪ್ರಿನ್ಸಿಪಲ್ ಚೀಫ್ ಎಂಜಿನಿಯರ್ ಸುನಿಲ್ ಎನ್. ಮಾಸ್ಕೆ ಹಾಗೂ ಡಿಆರ್‌ಎಂ ಬೇಲಾ ಮೀನಾ ಉಪಸ್ಥಿತರಿದ್ದರು.

# ಭಯೋತ್ಪಾದನೆ ಪ್ರಶ್ನೆಗೆ ಪಾಕ್ ಪತ್ರಕರ್ತನಿಗೆ ಜೈಶಂಕರ್ ತೀಕ್ಷ್ಣ ಪ್ರತಿಕ್ರಿಯೆ

ದೇಶವೊಂದು ನನಗೆ ಈ ಪ್ರಶ್ನೆ ಕೇಳುತ್ತಿದೆಯೇ? ಕಮ್ ಆನ್'' ಎಂದು ಪ್ರತಿಕ್ರಿಯಿಸಿದರು. ಬಳಿಕ ವಿಶ್ವಸಂಸ್ಥೆಯಲ್ಲಿನ ಭಾರತದ ಖಾಯಂ ಪ್ರತಿನಿಧಿ ಹರೀಶ್ ಪರ್ವತನೇನಿ, ಪತ್ರಕರ್ತನಿಗೆ ''ನಿಮ್ಮ ಪ್ರಶ್ನೆಗೆ ಉತ್ತರ ಸ್ಪಷ್ಟವಾಗಿ ಸಿಕ್ಕಿದೆ'' ಎಂದು ತಿಳಿಸಿದರು.

ಇದಕ್ಕೂ ಒಂದು ದಿನ ಮೊದಲು ವಿಶ್ವಸಂಸ್ಥೆ ಕೇಂದ್ರ ಕಚೇರಿಗೆ ಆಗಮಿಸಿದ್ದ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರಿಗೆ ಭಾರತೀಯ ಪತ್ರಕರ್ತರೊಬ್ಬರು, ''ಭಯೋತ್ಪಾದಕರಿಗೆ ಆಶ್ರಯ ನೀಡುವುದನ್ನು ಯಾವಾಗ ನಿಲ್ಲಿಸುತ್ತೀರಿ?'' ಎಂದು ಪ್ರಶ್ನಿಸಿದ್ದರು. ಮತ್ತೊಂದು ಸಂದರ್ಭದಲ್ಲಿ ಲಷ್ಕರ್-ಎ-ತೊಯ್ಬಾ ಮುಖ್ಯಸ್ಥ ಹಫೀಜ್ ಸಯೀದ್ ವಿರುದ್ಧ ಯಾವಾಗ ಕ್ರಮ ಕೈಗೊಳ್ಳಲಾಗುತ್ತದೆ ಎಂದೂ ಪ್ರಶ್ನಿಸಲಾಗಿತ್ತು. ಷರೀಫ್ ಈ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿರಲಿಲ್ಲ ಎಂದು ವರದಿಯಾಗಿದೆ.

# ರೈತರ ಬೆಳೆನಷ್ಟಕ್ಕೆ ಪರಿಹಾರ, ಸಮರ್ಪಕ ನೀರು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯ

ಬಲದಂಡೆ ನಾಲೆಗಳ ಕೊನೆಯ ಭಾಗದ ರೈತರಿಗೂ ಸಮರ್ಪಕ ನೀರು ತಲುಪುವಂತೆ ಕ್ರಮ ಕೈಗೊಳ್ಳಬೇಕು. ವಿದ್ಯುತ್ ಸಮಸ್ಯೆಯಿಂದ ಕೃಷಿ ಪಂಪ್‌ಸೆಟ್‌ಗಳಿಗೆ ತೊಂದರೆಯಾಗುತ್ತಿದ್ದು, ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆ ಖಚಿತಪಡಿಸಬೇಕು ಎಂದು ಒತ್ತಾಯಿಸಿದರು.

ಜೋಳ ಖರೀದಿ ಕೇಂದ್ರಗಳಲ್ಲಿ ರೈತರಿಗೆ ಸೂಕ್ತ ಬೆಲೆ ದೊರೆಯುವಂತೆ ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿನ ಜೋಳವನ್ನು ಎಕರೆಗೆ ಬೆಳೆದ ಪ್ರಮಾಣದ ಆಧಾರದ ಮೇಲೆ ಖರೀದಿಸುವ ವ್ಯವಸ್ಥೆ ರೂಪಿಸಬೇಕು. ನಾರಾಯಣಪುರ ಬಲದಂಡೆ ನಾಲೆಯ ವಾರಾಬಂದಿ ಪದ್ಧತಿಯಲ್ಲಿ ರೈತರಿಗೆ ಅನುಕೂಲವಾಗುವಂತೆ ನೀರು ಹರಿಸಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಸರ್ಕಾರದ ಮುಂದಿಟ್ಟರು.

ಲಿಂಗಸುಗೂರು ಹಾಗೂ ಮುದಗಲ್ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ರೈತರಿಂದ ಅನಧಿಕೃತವಾಗಿ ಕಮಿಷನ್ ವಸೂಲಿ ಹಾಗೂ ಸೂಟ್ ತೆಗೆಯಲಾಗುತ್ತಿದೆ ಎಂಬ ಆರೋಪಗಳಿದ್ದು, ಇದಕ್ಕೆ ಕಡಿವಾಣ ಹಾಕಲು ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಫಸಲ್ ಬಿಮಾ ಯೋಜನೆಯಡಿ ಪ್ರೀಮಿಯಂ ತುಂಬಿದ ರೈತರಿಗೆ ಬೆಳೆನಷ್ಟ ಸಂಭವಿಸಿದಲ್ಲಿ ಮಧ್ಯವರ್ತಿಗಳ ತೊಂದರೆಯಿಲ್ಲದೆ ನೇರವಾಗಿ ರೈತರ ಖಾತೆಗೆ ಪರಿಹಾರ ಜಮೆಯಾಗುವಂತೆ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ಈ ಎಲ್ಲ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ನಡೆಯಲಿರುವ ಧರಣಿಯಲ್ಲಿ ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಚಾಮರಾಸ ಮಾಲಿಪಾಟೀಲ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯದರ್ಶಿ ಸೂಗುರಯ್ಯ ಆರ್.ಎಸ್. ಮಠ, ಜಿಲ್ಲಾಧ್ಯಕ್ಷ ಪ್ರಭಾಕರ ಪಾಟೀಲ ಇಂಗಳದಾಳ ಸೇರಿದಂತೆ ಸಂಘದ ವಿವಿಧ ಪದಾಧಿಕಾರಿಗಳು ಹಾಗೂ ರೈತ ಮುಖಂಡರು ಉಪಸ್ಥಿತರಿದ್ದರು.

# ವಾಸವಿ ಗಜಾನನ ಉತ್ಸವ ಸಮಿತಿಯಿಂದ ಅದ್ದೂರಿ 39ನೇ ಗಣೇಶ ವಿಸರ್ಜನಾ ಮಹೋತ್ಸವ

ಹಾಗೂ ಉತ್ಸವದ ಯಶಸ್ಸಿಗೆ ಸಹಕರಿಸಿದವರನ್ನು ಸಮಿತಿಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಆರ್ಯವೈಶ್ಯ ಗೀತಾ ಮಂದಿರದ ಅಧ್ಯಕ್ಷ ಲಕ್ಷ್ಮೀಪತಿ ಗಣಧಾಳ್, ಆರ್ಯವೈಶ್ಯ ಸಮಾಜದ ಅಧ್ಯಕ್ಷೆ ಸಾವಿತ್ರಿ ಪುರುಷೋತ್ತಮ್, ಕಾರ್ಯದರ್ಶಿ ಸಿ. ಪದ್ಮರಾಜ್, ಜಾತ್ರಂ ಶ್ರೀನಿವಾಸ್ ಸೇರಿದಂತೆ ಸಮಾಜದ ಹಿರಿಯರು ಹಾಗೂ ಮುಖಂಡರು ಉಪಸ್ಥಿತರಿದ್ದರು.

ವಾಸವಿ ಗಜಾನನ ಉತ್ಸವ ಸಮಿತಿಯ ಅಧ್ಯಕ್ಷ ಗಾರಲ್ ವೆಂಕಟೇಶ್, ಗೌರವಾಧ್ಯಕ್ಷ ಎಂ.ಆರ್. ಅಶ್ವಥ್, ಕಾರ್ಯದರ್ಶಿ ಅನ್ನ ಶ್ರೀಕಾಂತ್ ಸೇರಿದಂತೆ ಸಮಿತಿಯ ಪದಾಧಿಕಾರಿಗಳು ಹಾಗೂ ಸದಸ್ಯರು ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು.

# ಬೆಳ್ಳಿ ಮಹೋತ್ಸವ ಸಂಭ್ರಮ: ಪತ್ರಕರ್ತರ ಕೇರಂ ಕ್ರೀಡಾಕೂಟಕ್ಕೆ ಚಾಲನೆ

ಭಾಗವಹಿಸಬೇಕು ಎಂದು ಕರೆ ನೀಡಿದರು.

ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ ಜಾಗಟಗಲ್ ಮಾತನಾಡಿ, ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಹಿನ್ನೆಲೆಯಲ್ಲಿ ವಿವಿಧ ಕ್ರೀಡಾ, ಸಾಂಸ್ಕೃತಿಕ ಹಾಗೂ ಇತರ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ. ಪತ್ರಕರ್ತರು ಕ್ರೀಡಾಸ್ಫೂರ್ತಿಯಿಂದ ಪಂದ್ಯಾವಳಿಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ಬಳಿಕ ನಗರದ ವಿವಿಧ ಮಾಧ್ಯಮ ಸಂಸ್ಥೆಗಳ ಪತ್ರಕರ್ತರು ಕೇರಂ ಪಂದ್ಯಾವಳಿಯಲ್ಲಿ ಉತ್ಸಾಹದಿಂದ ಪಾಲ್ಗೊಂಡರು.

ಈ ಸಂದರ್ಭದಲ್ಲಿ ಗಿಲ್ಡ್ ಕಾರ್ಯದರ್ಶಿ ವೆಂಕಟೇಶ ಹೂಗಾರ, ಜಂಟಿ ಕಾರ್ಯದರ್ಶಿ ಶ್ರೀಕಾಂತ್ ಸಾವೂರ, ರಾಚಯ್ಯಸ್ವಾಮಿ, ಮಂಜುನಾಥ ಸಾಲಿ, ಆನಂದ ವಿ.ಕೆ., ಗುರುರಾಜಗೌಡ, ಜಯಕುಮಾರ ದೇಸಾಯಿ, ಭೀಮೇಶ, ಅಬ್ದುಲ್ ಖಾದರ, ಜಿಲಾನಿ, ರಾಜು, ಸುರೇಶ ಸ್ವಾಮಿ, ರವಿ ದಾದಸ, ನಾಗರಾಜ್, ಶ್ರೀನಿವಾಸ ಇನಾಂದಾರ, ಮಲ್ಲಪ್ಪ ಸಾಹುಕಾರ್ ಸೇರಿದಂತೆ ಹಲವು ಪತ್ರಕರ್ತರು ಉಪಸ್ಥಿತರಿದ್ದರು.

# ಕನಿಷ್ಠ ವೇತನ, ಖಾಯಂ ನೇಮಕಾತಿಗೆ ಒತ್ತಾಯಿಸಿ ಶಾಸಕಿ ಕರಿಯಮ್ಮ ನಾಯಕ ಮನೆ ಮುಂದೆ ಪ್ರತಿಭಟನೆ

ಗ್ರಾಚ್ಯುಟಿ ಮತ್ತು ಬೋನಸ್ ಸೌಲಭ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ, ಕಾರ್ಮಿಕರಿಗೆ ವಸತಿ ಸೌಲಭ್ಯ ಹಾಗೂ ವಿವಿಧ ಇಲಾಖೆಗಳ ಹೊರಗುತ್ತಿಗೆ ನೌಕರರ ಬೇಡಿಕೆಗಳನ್ನು ಸರ್ಕಾರ ಆದ್ಯತೆಯಿಂದ ಪರಿಗಣಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ರಮಾದೇವಿ, ಹೈದರ್ ಅಲಿ, ಮರಿಯಮ್ಮ, ಶ್ರೀಲೇಖಾ, ಪಾಂಡುರಂಗ ನಾಯಕ, ಪಂಚಯ್ಯ, ಶೋಭಾ, ಈಶಮ್ಮ, ವೆಂಕಟೇಶ, ರಂಗನಾಥ ಸೇರಿದಂತೆ ವಿವಿಧ ಇಲಾಖೆಗಳ ಹೊರಗುತ್ತಿಗೆ ನೌಕರರು ಭಾಗವಹಿಸಿದ್ದರು.

**ನಗರ ಯೋಜನಾ ಪ್ರಾಧಿಕಾರ, ಮಾನವಿ**

ಭಾರತ ಪೆಟ್ರೋಲ್ ಬಂಕ್ ಹತ್ತಿರ ಸಿಂದನೂರ ರಸ್ತೆ ಮಾನವಿ 584123
Email: membersecratrytpamanavi@gmail.com

ಸಂಖ್ಯೆ:ನಯೋಪ್ರಾಮಾ/ಪ್ರಕಟಣೆ/2026-27 /420 ದಿನಾಂಕ:24-09-2026

**ಪ್ರಕಟಣೆ**

ರಾಜ್ಯದಲ್ಲಿ ಸ್ಥಳಿಯ ಯೋಜನಾ ಪ್ರದೇಶಗಳಲ್ಲಿನ ಅನುಮೋದಿತ ಮಹಾಯೋಜನೆ ಹೊಂದಿರುವ ಹಾಗೂ ಮಹಾ ಯೋಜನೆ ತಯಾರಿಕೆ ವಿವಿಧ ಹಂತಗಳಲ್ಲಿರುವ ನಗರ/ಪಟ್ಟಣಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 76-ಕೆ ರಡಿಯಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸದರಿಕಾಯ್ದೆಯ ಕಲಂ 12(1)(ಬಿ) ರಂತೆ ತಯಾರಿಸಿರುವ GIS ಆಧಾರಿತ Road Network Grid Plan ಗೆ ಸದರಿಕಾಯ್ದೆಯ ಕಲಂ 13(1) ರಡಿಯಲ್ಲಿ ಸರ್ಕಾರದಆದೇಶ ಸಂಖ್ಯೆ:ನಅಇ 358 2026(ಇ) ದಿನಾಂಕ:09-09-2026 ರಲ್ಲಿ ತಾತ್ಕಾಲಿಕ ಅನುಮೋದನೆ ನೀಡಲಾಗಿರುತ್ತದೆ.

ಮಾನವಿ ನಗರ ಯೋಜನಾ ಪ್ರಾಧಿಕಾರ ಸ್ಥಳಿಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಸಿದ್ದಪಡಿಸಿದಲಾಗಿರುವ GIS ಆಧಾರಿತ Road Network Grid Plan ನಕ್ಷೆಯನ್ನು ಈ ಕಛೇರಿಯಲ್ಲಿ ಹಾಗೂ ಮಾನವಿ ಪುರಸಭೆ ಕಛೇರಿಯಲ್ಲಿ ಸಾರ್ವಜನಿಕ ವಿಕ್ಷಣೆಗಾಗಿ ಇರಿಸಲಾಗಿರುತ್ತದೆ.

ಈ ಯೋಜನೆಯಿಂದ ಬಾಧಿತರಾಗಬಹುದಾದ ಸಾರ್ವಜನಿಕರು ತಮ್ಮ ಸಲಹೆ/ಸೂಚನೆಗಳು ಅಥವಾ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆಯು ದಿನ ಪತ್ರಿಕೆಯಲ್ಲಿ ಪ್ರಕಟಗೊಂಡ ದಿನಾಂಕ ದಿಂದ 60(ಆರವತ್ತು) ದಿನಗಳೊಳಗಾಗಿ ಈ ಕಛೇರಿಗೆಖುದ್ದಾಗಿ ನೋಂದಾಯಿತ ಅಂಚೆ ಅಥವಾ ಇ-ಮೇಲ್ ಮೂಲಕ ಸಲ್ಲಿಸಬಹುದಾಗಿದೆ.

ನಿಗಧಿತ 60(ಅರವತ್ತು) ದಿನಗಳ ಅವಧಿಯೊಳಗೆ ಸ್ವೀಕರಿಸಲ್ಪಟ್ಟ ಸಲಹೆ, ಸೂಚನೆಗಳು ಹಾಗೂ ಆಕ್ಷೇಪಣೆಗಳನ್ನು ಮಾತ್ರ ಪರಿಗಣಿಸಲಾಗುವುದು ಸದರಿ ಅವಧಿ ಮುಕ್ತಾಯಗೊಂಡ ನಂತರ ಸ್ವೀಕರಿಸಲ್ಪಡುವ ಯಾವುದೇ ಸಲಹೆ, ಸೂಚನೆ ಅಥವಾ ಆಕ್ಷೆಪಣೆಯನ್ನು ಪರಿಗಣಿಸಲಾಗುವುದಿಲ್ಲ ಎಂದು ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸಲಾಗಿದೆ.

ಸಹಿ/- ಸದಸ್ಯ ಕಾರ್ಯದರ್ಶಿಗಳು,
ನಗರ ಯೋಜನಾ ಪ್ರಾಧಿಕಾರ, ಮಾನ್ವಿ.

DIP/RCR/291KSMCA/294/2026-27


## ಕೋತಾ ಗ್ರಾಮದ ಐತಿಹಾಸಿಕ ರಾಮಲಿಂಗೇಶ್ವರ ದೇವಸ್ಥಾನಕ್ಕೆ ಪುರಾತತ್ವ ಇಲಾಖೆ ಅಧಿಕಾರಿಗಳ ಭೇಟಿ



ಹಟ್ಟಿ ಚಿನ್ನದ ಗಣಿ, ಸೆ.25: ಸಮೀಪದ ಕೋತಾ ಗ್ರಾಮದಲ್ಲಿರುವ ಕಲ್ಯಾಣ ಚಾಲುಕ್ಯರ ಕಾಲದ ಕ್ರಿ.ಶ. 12ನೇ ಶತಮಾನದ ಐತಿಹಾಸಿಕ ಶ್ರೀ ರಾಮಲಿಂಗೇಶ್ವರ ದೇವಸ್ಥಾನಕ್ಕೆ ಮೈಸೂರಿನ ಪುರಾತತ್ವ, ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆಯ ಸಹಾಯಕ ಅಭಿಯಂತರ ಸತೀಶ್ ಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ದೇವಸ್ಥಾನದ ಸ್ಥಾಪನೆಯ ಕಾಲ, ವಾಸ್ತುಶಿಲ್ಪ, ಐತಿಹಾಸಿಕ ಮಹತ್ವ ಹಾಗೂ ಅಲ್ಲಿರುವ ಶಾಸನಗಳ ಕುರಿತು ಮಾಹಿತಿ ಪಡೆದ ಅವರು, ಗರ್ಭಗುಡಿ, ಕಂಬಗಳು, ಮೇಲ್ಛಾವಣಿ ಸೇರಿದಂತೆ ಹಾನಿಗೊಳಗಾಗಿರುವ ವಿವಿಧ ಭಾಗಗಳನ್ನು ವೀಕ್ಷಿಸಿದರು. ದೇವಸ್ಥಾನದ ಪ್ರಸ್ತುತ ಸ್ಥಿತಿ, ಪುನಶ್ಚೇತನ ಹಾಗೂ ಸಂರಕ್ಷಣೆಯ ಅಗತ್ಯತೆ ಕುರಿತು ಸ್ಥಳೀಯರಿಂದ ಸಮಗ್ರ ಮಾಹಿತಿ ಪಡೆದುಕೊಂಡರು.

ಇತಿಹಾಸಾಸಕ್ತ ಅಶೋಕ ನಾಯಕ ದಿದ್ದಗಿ ಅವರು ಈ ಹಿಂದೆ ಗ್ರಾಮದ ಮುಖಂಡರು ಹಾಗೂ ಸ್ಥಳೀಯರಿಗೆ ದೇವಸ್ಥಾನದ ಐತಿಹಾಸಿಕ ಮಹತ್ವದ ಕುರಿತು ಮಾಹಿತಿ ನೀಡಿ, ಅದರ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಮುಂದಾಗುವಂತೆ ಮನವಿ ಮಾಡಿದ್ದರು. ಅದರಂತೆ ಗ್ರಾಮಸ್ಥರು ಸೆ.21ರಂದು ಮೈಸೂರಿನ ಪುರಾತತ್ವ, ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆಯ ಅಧಿಕಾರಿಗಳಿಗೆ ಮನವಿ ಸಲ್ಲಿಸಿ, ದೇವಾಲಯವನ್ನು ಇಲಾಖೆಯ ಅಧೀನಕ್ಕೆ ಪಡೆದು ಸಂರಕ್ಷಿಸಿ ಅಭಿವೃದ್ಧಿಪಡಿಸುವಂತೆ ಕೋರಿದ್ದರು.

ಗ್ರಾಮಸ್ಥರ ಮನವಿಗೆ ಸ್ಪಂದಿಸಿ ದೇವಸ್ಥಾನಕ್ಕೆ ಭೇಟಿ ನೀಡಿದ ಅಧಿಕಾರಿಗಳು, ದೇವಾಲಯದ ಪುನಶ್ಚೇತನ ಮತ್ತು ಅಭಿವೃದ್ಧಿಗೆ ಸಂಬಂಧಿಸಿ ಜಿಲ್ಲೆಯ ಸಚಿವರು, ಶಾಸಕರು ಹಾಗೂ ಸಂಸದರಿಗೆ ಪತ್ರ ಬರೆದು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಶಾಸಕರ ಅನುದಾನ ಸೇರಿದಂತೆ ವಿವಿಧ ಮೂಲಗಳಿಂದ ಹಂತ ಹಂತವಾಗಿ ಅಭಿವೃದ್ಧಿ ಕೈಗೊಳ್ಳುವ ಕುರಿತು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಶಿವಣ್ಣ ನಾಯಕ, ವಿಶ್ವನಾಥ್ ನಂದಿಕೋಲು ಮಠ, ಅಮರೇಗೌಡ ಮಾಲಿಪಾಟೀಲ್, ಅಂಬರೀಶ್ ಶೆಡ್ಲಿಗೆ, ಬಸನಗೌಡ ಪೊಲೀಸ್ ಪಾಟೀಲ್, ರಾಜಾಲಿಂಗ ರಾಜ್ ನಾಯಕ, ಮೌನೇಶ್ ಕರ್ಕಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಕೋಶ ಉದ್ಘಾಟನೆ




ರಾಯಚೂರು: ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ (ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜು) ಬುಧವಾರ ನೂತನ ಸಂಶೋಧನೆ ಮತ್ತು ಅಭಿವೃದ್ಧಿ (R&D) ಕೋಶದ ಉದ್ಘಾಟನಾ ಸಮಾರಂಭ ನಡೆಯಿತು.

ವಿದ್ಯಾರ್ಥಿಗಳು ಹಾಗೂ ಅಧ್ಯಾಪಕರಲ್ಲಿ ಸಂಶೋಧನಾ ಮನೋಭಾವ ಬೆಳೆಸುವುದು, ನಾವೀನ್ಯತೆಗೆ ಉತ್ತೇಜನ ನೀಡುವುದು ಹಾಗೂ ಅಂತರಶಿಸ್ತೀಯ ಅಧ್ಯಯನ ಮತ್ತು ಸಂಶೋಧನಾ ಚಟುವಟಿಕೆಗಳಿಗೆ ಪೂರಕ ವಾತಾವರಣ ಕಲ್ಪಿಸುವ ಉದ್ದೇಶದಿಂದ ಕಾಲೇಜಿನಲ್ಲಿ ನೂತನ ಆರ್ ಅಂಡ್ ಡಿ ಕೋಶವನ್ನು ಸ್ಥಾಪಿಸಲಾಗಿದೆ.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಿವಾನಂದ ಕೆಳಗಿನಮನಿ ಅವರು ಕೋಶವನ್ನು ಉದ್ಘಾಟಿಸಿ ಮಾತನಾಡಿ, ಪ್ರಸ್ತುತ ಶಿಕ್ಷಣ ವ್ಯವಸ್ಥೆಯಲ್ಲಿ ಸಂಶೋಧನೆಗೆ ಹೆಚ್ಚಿನ ಮಹತ್ವವಿದೆ. ವಿದ್ಯಾರ್ಥಿಗಳು ಪಠ್ಯಕ್ರಮದ ಅಧ್ಯಯನಕ್ಕೆ ಮಾತ್ರ ಸೀಮಿತವಾಗದೆ ಹೊಸ ವಿಷಯಗಳ ಅನ್ವೇಷಣೆ, ವೈಜ್ಞಾನಿಕ ಚಿಂತನೆ ಹಾಗೂ ನಾವೀನ್ಯತೆಯತ್ತ ಗಮನಹರಿಸಬೇಕು ಎಂದು ಹೇಳಿದರು. ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಸಂಶೋಧನಾ ಚಟುವಟಿಕೆಗಳು ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲ ಪ್ರೊ. ಯಂಕಣ್ಣ ಅವರ ಅಧ್ಯಕ್ಷತೆಯಲ್ಲಿ ನಡೆದ ಸಮಾರಂಭದಲ್ಲಿ ಆರ್ ಅಂಡ್ ಡಿ ಕೋಶದ ನಿರ್ದೇಶಕ ಡಾ. ಎಂ. ರವಿ ಪ್ರಾಸ್ತಾವಿಕವಾಗಿ ಮಾತನಾಡಿ, ಕೋಶ ಸ್ಥಾಪನೆಯ ಉದ್ದೇಶ ಹಾಗೂ ಮುಂದಿನ ಸಂಶೋಧನಾ ಚಟುವಟಿಕೆಗಳ ಕುರಿತು ವಿವರಿಸಿದರು. ಉಪನಿರ್ದೇಶಕ ಡಾ. ರಾಘವೇಂದ್ರ ಅವರು ಆರ್ ಅಂಡ್ ಡಿ ಕೋಶದ ಕಾರ್ಯವೈಖರಿ ಹಾಗೂ ಅದರ ಮೂಲಕ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಿಗೆ ದೊರೆಯಲಿರುವ ಅವಕಾಶಗಳ ಕುರಿತು ಮಾಹಿತಿ ನೀಡಿದರು.

ಅಧ್ಯಕ್ಷೀಯ ಭಾಷಣ ಮಾಡಿದ ಪ್ರೊ. ಯಂಕಣ್ಣ ಅವರು, ಮುಂಬರುವ ದಿನಗಳಲ್ಲಿ ಆರ್ ಅಂಡ್ ಡಿ ಕೋಶವು ಕಾಲೇಜಿನ ಶೈಕ್ಷಣಿಕ ಹಾಗೂ ಸಂಶೋಧನಾ ಬೆಳವಣಿಗೆಗೆ ಸಹಕಾರಿಯಾಗಲಿದೆ. ಕಾಲೇಜು ಮತ್ತು ವಿಶ್ವವಿದ್ಯಾಲಯದ ನಡುವಿನ ಒಡಂಬಡಿಕೆ ಹಾಗೂ ಪರಸ್ಪರ ಸಹಕಾರದಿಂದ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳಿಗೆ ಸಂಶೋಧನಾ ಕ್ಷೇತ್ರದಲ್ಲಿ ಹಲವು ಅವಕಾಶಗಳು ದೊರೆಯಲಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಜ್ಞಾನ ವಿಭಾಗದ ಡೀನ್ ಡಾ. ಸೋಮನಾಥರೆಡ್ಡಿ ಸಿ. ಪಾಟೀಲ್ ಸೇರಿದಂತೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಡಾ. ಶಿವರಾಜಕುಮಾರ್ ಸ್ವಾಗತಿಸಿದರು. ಬಿಸಿಎ ವಿದ್ಯಾರ್ಥಿನಿ ಸಿಂಧು ಪ್ರಾರ್ಥನಾ ಗೀತೆ ಹಾಡಿದರು. ಶಿಲ್ಪಕಲಾ ಕಾರ್ಯಕ್ರಮ ನಿರೂಪಿಸಿದರು. ಐಕ್ಯುಎಸಿ (IQAC) ಸಂಯೋಜಕ ಡಾ. ಮಹಾಂತೇಶ್ ವಿ. ಅಂಗಡಿ ವಂದಿಸಿದರು.

## ದಾಸ ಸಾಹಿತ್ಯ, ಜನಪದ ಪರಂಪರೆ ಉಳಿಸಿ ಬೆಳೆಸುವುದು ನಮ್ಮ ಕರ್ತವ್ಯ



ದೇವದುರ್ಗ: ದಾಸ ಸಾಹಿತ್ಯವು ಹರಿ ಚಿಂತನೆಯ ಸಾಹಿತ್ಯವಾಗಿದ್ದು, ಮಾನವನ ಹುಟ್ಟು-ಸಾವು, ಜೀವಾತ್ಮ-ಪರಮಾತ್ಮ ಹಾಗೂ ಬದುಕಿನ ನಶ್ವರತೆಯ ಕುರಿತು ಸಂದೇಶ ನೀಡುವುದರ ಜೊತೆಗೆ ಧಾರ್ಮಿಕ ಚಿಂತನೆ ಮತ್ತು ಭಗವಂತನ ಸಾಕ್ಷಾತ್ಕಾರದ ಮಾರ್ಗವನ್ನು ತೋರಿಸುತ್ತದೆ ಎಂದು ಉಪನ್ಯಾಸಕ ಸಿದ್ದಪ್ಪ ಕಂಬಳಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ರಾಯಚೂರು ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ದೇವದುರ್ಗ ವತಿಯಿಂದ ಪಟ್ಟಣದ ಬಸವೇಶ್ವರ ಡಿ.ಎಡ್ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ದತ್ತಿ ನಿಧಿ ಕಾರ್ಯಕ್ರಮದಲ್ಲಿ ದಾಸ ಸಾಹಿತ್ಯ ಕುರಿತು ಅವರು ಉಪನ್ಯಾಸ ನೀಡಿದರು.

ದಾಸ ಸಾಹಿತ್ಯವು ಪಾರಮಾರ್ಥಿಕ ಹಾಗೂ ಅಲೌಕಿಕ ಬದುಕಿನ ಮೌಲ್ಯಗಳನ್ನು ಸಾರುವ ಸಾಹಿತ್ಯವಾಗಿದೆ. ಕನಕದಾಸರು, ಪುರಂದರದಾಸರು, ವಿಠ್ಠಲದಾಸರು ಸೇರಿದಂತೆ ಅನೇಕ ಹರಿದಾಸರು ಜಾತಿ-ಧರ್ಮದ ಭೇದವಿಲ್ಲದೆ ಮನುಕುಲಕ್ಕೆ ಮುಕ್ತಿಮಾರ್ಗದ ಸಂದೇಶ ನೀಡಿದ್ದಾರೆ. ದೇವದುರ್ಗ ತಾಲೂಕಿನ ಮೊಸರುಕಲ್ ಗೋಪಾಲದಾಸರು, ರಾಮದಾಸರು ಹಾಗೂ ಮಾನ್ವಿಯ ಜಗನ್ನಾಥದಾಸರು ದಾಸ ಪರಂಪರೆಯ ಶ್ರೇಷ್ಠ ಸಾಧಕರಾಗಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯ ತತ್ವಪದಕಾರರಾದ ಗೂಗಲ್ ಪರಪ್ಪಯ್ಯ, ಗಬ್ಬೂರು ಹಂಪಣ್ಣ, ಆದಿ ಅಮಾತ್ಯಪ್ಪ, ಮಾರ್ತಾಂಡಪ್ಪ, ಹನುಮಂತರಾವ್ ಸೇರಿದಂತೆ ಹಲವರು ಭಕ್ತಿ, ಭಜನೆ ಮತ್ತು ತತ್ವಪದಗಳ ಮೂಲಕ ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ದತ್ತಿ ಉಪನ್ಯಾಸಕರಾಗಿ ಮಾತನಾಡಿದ ಮಲ್ಲೇಶ್ವರಯ್ಯ ನೂಲಿ, ಜನಪದ ಸಾಹಿತ್ಯವು ಜನರ ಬದುಕಿನಿಂದಲೇ ಹುಟ್ಟಿ, ಬಾಯಿಂದ ಬಾಯಿಗೆ ಬೆಳೆದು ಬಂದ ಸಾಂಸ್ಕೃತಿಕ ಪರಂಪರೆಯಾಗಿದೆ ಎಂದರು. ಸೋಬಾನೆ ಗೀತೆಗಳು, ತೊಟ್ಟಿಲು ಹಾಡುಗಳು, ಗ್ರಾಮೀಣ ಕ್ರೀಡೆಗಳು, ವೇಷಗಳು, ನಾಟಕಗಳು, ಮೊಹರಂ ಹಬ್ಬದ ಹಾಡುಗಳು, ಬೀಸುವ ಕಲ್ಲಿನ ಪದಗಳು, ಭಜನೆ ಪದಗಳು, ಬಯಲಾಟ ಹಾಗೂ ರಂಗನಾಟಕಗಳು ಜನಪದ ಸಾಹಿತ್ಯದ ಅಮೂಲ್ಯ ಕೊಡುಗೆಗಳಾಗಿವೆ ಎಂದು ಹೇಳಿದರು.

ಆಧುನಿಕ ತಂತ್ರಜ್ಞಾನ, ಟಿವಿ ಹಾಗೂ ಮೊಬೈಲ್ ಪ್ರಭಾವದಿಂದ ಜನಪದ ಸಾಹಿತ್ಯ, ಒಗಟುಗಳು ಮತ್ತು ಸಾಂಪ್ರದಾಯಿಕ ಕಲಾಪ್ರಕಾರಗಳು ನಿಧಾನವಾಗಿ ಕಣ್ಮರೆಯಾಗುತ್ತಿದ್ದು, ಅವುಗಳನ್ನು ಉಳಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವುದು ಎಲ್ಲರ ಕರ್ತವ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಕೇಮಣ್ಣ ಪವರ್ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ಶತಮಾನಕ್ಕೂ ಹೆಚ್ಚು ಕಾಲ ಕನ್ನಡ ನಾಡು-ನುಡಿ, ಭಾಷೆ, ಕಲೆ, ಸಾಹಿತ್ಯ, ಸಂಸ್ಕೃತಿ ಮತ್ತು ಸಂಗೀತದ ಬೆಳವಣಿಗೆಗಾಗಿ ಶ್ರಮಿಸುತ್ತಿದೆ. ಕನ್ನಡ ಭಾಷೆಗೆ ಎಂಟು ಜ್ಞಾನಪೀಠ ಪ್ರಶಸ್ತಿಗಳು ದೊರೆತಿರುವುದು ಹೆಮ್ಮೆಯ ಸಂಗತಿ ಎಂದರು. ಪ್ರಶಿಕ್ಷಣಾರ್ಥಿಗಳು ಕಲೆ, ಸಾಹಿತ್ಯ, ಸಂಗೀತ, ಕ್ರೀಡೆ ಹಾಗೂ ಸಮುದಾಯ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಸಲಹೆ ನೀಡಿದರು.

ವೇದಿಕೆಯಲ್ಲಿ ದತ್ತಿದಾನಿಗಳಾದ ಭಾರತಿ ಗುರುಲಿಂಗಯ್ಯ ಕೋಡಿಮಠ, ಗಿರಿಜಮ್ಮ ಶಿಖರಮಠ, ಆದಿ ವಿಜಯಲಕ್ಷ್ಮಿ ಚಂದ್ರಶೇಖರ್ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಎಚ್. ಶಿವರಾಜ್ ಉಪಸ್ಥಿತರಿದ್ದರು. ಗೌರವ ಕಾರ್ಯದರ್ಶಿ ಬಸವರಾಜ್ ಕೊಪ್ಪರ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸತ್ಯನಾರಾಯಣ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಪ್ರಶಿಕ್ಷಣಾರ್ಥಿಗಳು, ಶಿಕ್ಷಕರು ಹಾಗೂ ಉಪನ್ಯಾಸಕ ಸಿಬ್ಬಂದಿ ಭಾಗವಹಿಸಿದ್ದರು.

## ಆರೋಗ್ಯಕರ ಹಾಗೂ ಸದೃಢ ದೇಹಕ್ಕೆ ಪೌಷ್ಟಿಕ ಆಹಾರ ಅಗತ್ಯ: ಮಹೇಶ ನಾಯಕ



ದೇವದುರ್ಗ: ಮನುಷ್ಯನ ಆರೋಗ್ಯಕರ ಹಾಗೂ ಸದೃಢ ದೇಹಕ್ಕೆ ಪೌಷ್ಟಿಕಾಂಶಯುತ ಆಹಾರ ಅತ್ಯಗತ್ಯವಾಗಿದ್ದು, ಈ ಕುರಿತು ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಪೋಷಣ್ ಮಾಸಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಹೇಶ ನಾಯಕ ಹೇಳಿದರು.

ಅರಕೇರಾ ತಾಲೂಕಿನ ಬಿ. ಗಣೇಕಲ್ ಗ್ರಾಮದಲ್ಲಿ ಆಯೋಜಿಸಿದ್ದ ಪೋಷಣ್ ಅಭಿಯಾನ ಯೋಜನೆಯ ಪೋಷಣ್ ಮಾಸಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿನ ಅಪೌಷ್ಟಿಕತೆಯನ್ನು ತಡೆಗಟ್ಟುವುದು ಹಾಗೂ ಗರ್ಭಿಣಿಯರು, ಬಾಣಂತಿಯರು ಮತ್ತು ಚಿಕ್ಕ ಮಕ್ಕಳಲ್ಲಿ ಕಂಡುಬರುವ ರಕ್ತಹೀನತೆಯನ್ನು ಕಡಿಮೆಗೊಳಿಸುವುದು ಪೋಷಣ್ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಉತ್ತಮ ಆರೋಗ್ಯಕ್ಕಾಗಿ ಪೌಷ್ಟಿಕ ಆಹಾರ ಸೇವನೆ ಅತ್ಯಂತ ಅಗತ್ಯ. ಈ ಕುರಿತು ವ್ಯಾಪಕ ಜಾಗೃತಿ ಮೂಡಿಸುವ ಸಲುವಾಗಿ ಸೆ.1ರಿಂದ 31ರವರೆಗೆ ಪೋಷಣ್ ಮಾಸಾಚರಣೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಕುಟುಂಬದ ಸದಸ್ಯರ ಆರೋಗ್ಯ ಕಾಪಾಡುವಲ್ಲಿ ತಾಯಂದಿರ ಪಾತ್ರ ಮಹತ್ವದ್ದಾಗಿದೆ. ದಿನನಿತ್ಯದ ಆಹಾರದಲ್ಲಿ ವಿವಿಧ ಬಗೆಯ ಸೊಪ್ಪು, ತರಕಾರಿ, ಕಾಳುಗಳು, ಹಾಲು, ಮೊಸರು ಹಾಗೂ ತುಪ್ಪ ಸೇರಿದಂತೆ ಪೌಷ್ಟಿಕಾಂಶಯುತ ಆಹಾರ ಪದಾರ್ಥಗಳನ್ನು ಹೆಚ್ಚಾಗಿ ಬಳಸಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಗರ್ಭಿಣಿಯರಿಗೆ ಸೀಮಂತ ಹಾಗೂ ಮಕ್ಕಳಿಗೆ ಅನ್ನಪ್ರಾಶನ ಕಾರ್ಯಕ್ರಮ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಸ್ತ್ರೀಶಕ್ತಿ ಒಕ್ಕೂಟದ ಅಧ್ಯಕ್ಷೆ ಶರಣಮ್ಮ ಪಾಟೀಲ್, ವಲಯ ಮೇಲ್ವಿಚಾರಕಿ ಶಾಂತಬಾಯಿ, ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು, ಗ್ರಾಮ ಪಂಚಾಯಿತಿ ಸಿಬ್ಬಂದಿ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು, ಗರ್ಭಿಣಿಯರು, ಕಿಶೋರಿಯರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಿ.ಬಿ. ರಾಮಜೀ ಯೋಜನೆಯಡಿ ಗ್ರಾಮೀಣ ಕೂಲಿ ಕಾರ್ಮಿಕರಿಗೆ ಉದ್ಯೋಗಾವಕಾಶ: ಫಾ. ಜಾರ್ಜ್




ಮಾನ್ವಿ: ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕಾ ಮಿಷನ್ (ವಿ.ಬಿ. ರಾಮಜೀ) ಯೋಜನೆಯಡಿ ಗ್ರಾಮೀಣ ಪ್ರದೇಶದ ಕೂಲಿ ಕಾರ್ಮಿಕರಿಗೆ ಗ್ರಾಮ ಪಂಚಾಯಿತಿಗಳ ಮೂಲಕ ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದ್ದು, ಅರ್ಹ ಫಲಾನುಭವಿಗಳು ಯೋಜನೆಯ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಲೋಯೋಲ ಸಮಾಜ ಸೇವಾ ಕೇಂದ್ರದ ನಿರ್ದೇಶಕ ಫಾ. ಜಾರ್ಜ್ ಹೇಳಿದರು.

ತಾಲೂಕಿನ ಚಿಕ್ಕಲಪರ್ವಿ ಗ್ರಾಮದಲ್ಲಿ ತಾಲೂಕು ಪಂಚಾಯಿತಿ ಹಾಗೂ ಲೋಯೋಲ ಸಮಾಜ ಸೇವಾ ಕೇಂದ್ರದ ವತಿಯಿಂದ ಆಯೋಜಿಸಿದ್ದ ವಿ.ಬಿ. ರಾಮಜೀ ಯೋಜನೆಯ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಯೋಜನೆಯಡಿ ಗ್ರಾಮೀಣ ಪ್ರದೇಶದ ಅರ್ಹ ಕೂಲಿ ಕಾರ್ಮಿಕರಿಗೆ ಗ್ರಾಮ ಪಂಚಾಯಿತಿಗಳ ಮೂಲಕ ಕೆಲಸ ಒದಗಿಸಲಾಗುತ್ತದೆ. ಸಮಾನ ಕೆಲಸಕ್ಕೆ ಸಮಾನ ಕೂಲಿ ತತ್ವದಡಿ ದಿನಕ್ಕೆ ₹382 ಕೂಲಿ ನಿಗದಿಪಡಿಸಲಾಗಿದ್ದು, ಒಂದು ಕುಟುಂಬಕ್ಕೆ ವರ್ಷದಲ್ಲಿ ಗರಿಷ್ಠ 125 ದಿನಗಳವರೆಗೆ ಉದ್ಯೋಗ ಪಡೆಯಲು ಅವಕಾಶವಿದೆ. ಒಂದು ಗ್ರಾಮೀಣ ಉದ್ಯೋಗ ಖಾತ್ರಿ ಕಾರ್ಡ್ ಮೂಲಕ ವಾರ್ಷಿಕ ಗರಿಷ್ಠ ₹47,750ವರೆಗೆ ಕೂಲಿ ಪಡೆಯಬಹುದಾಗಿದೆ ಎಂದು ಮಾಹಿತಿ ನೀಡಿದರು.

ಯೋಜನೆಯ ನಿಯಮಾನುಸಾರ ನಿಗದಿತ ಪ್ರಮಾಣದ ಕೆಲಸ ನಿರ್ವಹಿಸಿದವರಿಗೆ ಪೂರ್ಣ ಕೂಲಿ ಪಾವತಿಸಲಾಗುತ್ತದೆ. ಕೆಲಸದ ಪ್ರಮಾಣ ಕಡಿಮೆಯಾದಲ್ಲಿ ಅದಕ್ಕೆ ಅನುಗುಣವಾಗಿ ಕೂಲಿ ಪಾವತಿಸಲಾಗುತ್ತದೆ. ನಮೂನೆ06ರಡಿ ಕೆಲಸಕ್ಕಾಗಿ ಅರ್ಜಿ ಸಲ್ಲಿಸಿದ 15 ದಿನಗಳೊಳಗೆ ಉದ್ಯೋಗ ನೀಡದಿದ್ದಲ್ಲಿ ನಿಯಮಾನುಸಾರ ನಿರುದ್ಯೋಗ ಭತ್ಯೆ ಪಡೆಯಲು ಅವಕಾಶವಿದೆ ಎಂದು ತಿಳಿಸಿದರು.

ನೂತನ ಯೋಜನೆಯಡಿ 318 ವಿಧದ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದ್ದು, ಕಾಮಗಾರಿ ಸ್ಥಳಗಳಲ್ಲಿ ಕಾರ್ಮಿಕರಿಗೆ ಅಗತ್ಯ ಮೂಲಸೌಲಭ್ಯಗಳನ್ನು ಕಲ್ಪಿಸಲಾಗುತ್ತದೆ. ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ ಹಾಗೂ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ವಿಮಾ ಯೋಜನೆಗಳ ಪ್ರಯೋಜನವನ್ನೂ ಪಡೆದುಕೊಳ್ಳಬಹುದು ಎಂದರು.

ಗ್ರಾಮಸ್ಥರು ಹೆಚ್ಚುವರಿ ಕ್ರಿಯಾಯೋಜನೆಗೆ ಸಂಬಂಧಿಸಿದ ಗ್ರಾಮಸಭೆಗಳಲ್ಲಿ ಭಾಗವಹಿಸಿ ತಮ್ಮ ಅಗತ್ಯಗಳನ್ನು ಪ್ರಸ್ತಾಪಿಸಬೇಕು. ಅರ್ಹ ಫಲಾನುಭವಿಗಳು ವೈಯಕ್ತಿಕ ಕಾಮಗಾರಿಗಳ ಸೌಲಭ್ಯಗಳನ್ನೂ ಪಡೆದುಕೊಳ್ಳಲು ಅವಕಾಶವಿದೆ ಎಂದು ಫಾ. ಜಾರ್ಜ್ ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಲೋಯೋಲ ಸಮಾಜ ಸೇವಾ ಕೇಂದ್ರದ ಕಾರ್ಯಕರ್ತರು ಗ್ರಾಮದ ಮನೆ ಮನೆಗೆ ಭೇಟಿ ನೀಡಿ ಉದ್ಯೋಗ ಚೀಟಿ ಮೇಳದ ಕುರಿತು ಕರಪತ್ರಗಳನ್ನು ವಿತರಿಸಿದರು. ಉದ್ಯೋಗ ಚೀಟಿ ಪಡೆಯುವ ವಿಧಾನ, ಅರ್ಜಿ ಸಲ್ಲಿಸುವ ಪ್ರಕ್ರಿಯೆ ಹಾಗೂ ಅಗತ್ಯ ದಾಖಲೆಗಳ ಕುರಿತು ಗ್ರಾಮಸ್ಥರು ಮತ್ತು ಕೂಲಿ ಕಾರ್ಮಿಕರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಲೋಯೋಲ ಸಮಾಜ ಸೇವಾ ಕೇಂದ್ರದ ಸೇವಕಿ ಅನ್ನಮ್ಮ, ತಾಲೂಕು ಪಂಚಾಯಿತಿ ಉದ್ಯೋಗ ಖಾತ್ರಿ ನಿರ್ದೇಶಕ ಮಹ್ಮದ್ ಸೇರಿದಂತೆ ಗ್ರಾಮಸ್ಥರು ಹಾಗೂ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

## ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ: ಸೆ.28ರಿಂದ ದೈಹಿಕ ಪರೀಕ್ಷೆ ಆರಂಭ

ಬೆಂಗಳೂರು, ಸೆ.25 (ಕರ್ನಾಟಕ ವಾರ್ತೆ): ರಾಜ್ಯ ಪೊಲೀಸ್ ಇಲಾಖೆಯ ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ (RPC ಮತ್ತು KK) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದ ದೇಹದಾರ್ಢ್ಯ ಪರೀಕ್ಷೆ (ET) ಹಾಗೂ ಸಹಿಷ್ಣುತಾ ಪರೀಕ್ಷೆ (PT) ಸೆ.28ರಿಂದ ಆರಂಭವಾಗಲಿದ್ದು, ಪೊಲೀಸ್ ನೇಮಕಾತಿ ವಿಭಾಗವು ವಲಯವಾರು ಪರೀಕ್ಷಾ ವೇಳಾಪಟ್ಟಿಯನ್ನು ಪ್ರಕಟಿಸಿದೆ.

ಒಟ್ಟು 3,991 ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದ್ದು, ರಾಜ್ಯದ ವಿವಿಧ ಘಟಕಗಳಿಂದ ಒಟ್ಟು 19,396 ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಅರ್ಹತೆ ಪಡೆದಿದ್ದಾರೆ. ಉಳಿಕೆ ಮೂಲ ವೃಂದದ (RPC) 3,395 ಹುದ್ದೆಗಳಿಗೆ 16,454 ಅಭ್ಯರ್ಥಿಗಳು ಹಾಗೂ ಕಲ್ಯಾಣ ಕರ್ನಾಟಕ (KK) ವೃಂದದ 596 ಹುದ್ದೆಗಳಿಗೆ 2,942 ಅಭ್ಯರ್ಥಿಗಳು ಪರೀಕ್ಷೆಗೆ ಆಯ್ಕೆಯಾಗಿದ್ದಾರೆ.

ಬೆಂಗಳೂರು ನಗರ ಘಟಕ: ಉಳಿಕೆ ಮೂಲ ವೃಂದದ 2,015 ಹುದ್ದೆಗಳಿಗೆ 9,887 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದು, ಸೆ.28ರಿಂದ ಅ.5ರವರೆಗೆ ಪರೀಕ್ಷೆಗಳು ನಡೆಯಲಿವೆ. ಚಾಮರಾಜಪೇಟೆಯ ಸಿರ್ಸಿ ಸರ್ಕಲ್‌ನ ಸಿಎಆರ್ (ಹೆಚ್‌ಕ್ಯೂ) ಮೈದಾನ, ಆಡುಗೋಡಿಯ ಸಿಎಆರ್ (ದಕ್ಷಿಣ) ಮೈದಾನ ಹಾಗೂ ಆರ್.ಕೆ. ಹೆಗಡೆ ನಗರದ ತನಿಸಂದ್ರ ಮುಖ್ಯ ರಸ್ತೆಯಲ್ಲಿರುವ ಸಿಎಆರ್ (ಉತ್ತರ) ಪರೇಡ್ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಕೇಂದ್ರ ವಲಯ: ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ಬೆಂಗಳೂರು ಜಿಲ್ಲೆ ಹಾಗೂ ರೈಲ್ವೆ ಘಟಕಗಳ 200 ಹುದ್ದೆಗಳಿಗೆ 946 ಅಭ್ಯರ್ಥಿಗಳು ಅರ್ಹರಾಗಿದ್ದಾರೆ. ಸೆ.28ರಿಂದ ಅ.3ರವರೆಗೆ ಬೆಂಗಳೂರಿನ ಕೋರಮಂಗಲದ ಮಡಿವಾಳ ಮಾರುಕಟ್ಟೆ ಎದುರಿನ 3ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ದಕ್ಷಿಣ ವಲಯ: ಮೈಸೂರು ನಗರ, ಮೈಸೂರು ಜಿಲ್ಲೆ, ಹಾಸನ, ಕೊಡಗು, ಚಾಮರಾಜನಗರ ಹಾಗೂ ಮಂಡ್ಯ ಘಟಕಗಳ 395 ಹುದ್ದೆಗಳಿಗೆ 1,891 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ. ಸೆ.28ರಿಂದ ಅ.5ರವರೆಗೆ ಮೈಸೂರಿನ ರೇಸ್ ಕೋರ್ಸ್ ಹಿಂಭಾಗದ ಸಿಟಿ ಆರ್ಮ್ಸ್ ರಿಸರ್ವ್ (CAR) ಪರೇಡ್ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಪೂರ್ವ ವಲಯ: ಶಿವಮೊಗ್ಗ, ಹಾವೇರಿ, ದಾವಣಗೆರೆ ಹಾಗೂ ಚಿತ್ರದುರ್ಗ ಘಟಕಗಳ 250 ಹುದ್ದೆಗಳಿಗೆ 1,234 ಅಭ್ಯರ್ಥಿಗಳು ಅರ್ಹರಾಗಿದ್ದಾರೆ. ಸೆ.29ರಿಂದ ಅ.6ರವರೆಗೆ ಶಿವಮೊಗ್ಗದ ನವಿಲೆಯಲ್ಲಿರುವ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಪಶ್ಚಿಮ ವಲಯ: ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ (ಕಾರವಾರ), ಚಿಕ್ಕಮಗಳೂರು ಹಾಗೂ ಮಂಗಳೂರು ನಗರ ಘಟಕಗಳ 395 ಹುದ್ದೆಗಳಿಗೆ 1,803 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ. ಸೆ.28ರಿಂದ ಅ.3ರವರೆಗೆ ಮಂಗಳೂರಿನ ಲಾಲ್‌ಬಾಗ್‌ನ ಮಂಗಳ ಕ್ರೀಡಾಂಗಣದಲ್ಲಿ ಪರೀಕ್ಷೆ ನಿಗದಿಯಾಗಿದೆ.

ಉತ್ತರ ವಲಯ: ಗದಗ ಹಾಗೂ ಹುಬ್ಬಳ್ಳಿ-ಧಾರವಾಡ ನಗರ ಘಟಕಗಳ 110 ಹುದ್ದೆಗಳಿಗೆ 549 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ. ಸೆ.29 ಮತ್ತು 30ರಂದು ಬೆಳಗಾವಿಯ ವಿಟಿಯು ಸಮೀಪದ ಮಚ್ಚೆಯಲ್ಲಿರುವ 2ನೇ ಬೆಟಾಲಿಯನ್ ಕೆಎಸ್ ಆರ್‌ಪಿ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ಬಳ್ಳಾರಿ ವಲಯ (RPC): ಬಳ್ಳಾರಿ ಮತ್ತು ರಾಯಚೂರು ಘಟಕಗಳ 30 ಹುದ್ದೆಗಳಿಗೆ 144 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದು, ಅ.5 ಮತ್ತು 6ರಂದು ಕೊಪ್ಪಳ ಜಿಲ್ಲೆಯ ಮುನಿರಾಬಾದ್‌ನ ಹೊಸಹಳ್ಳಿ ಬಳಿಯ ಕೆಎಸ್‌ಆರ್‌ಪಿ ಪಿ.ಟಿ.ಎಸ್. ಮೈದಾನದಲ್ಲಿ (ಐಆರ್‌ಬಿ ಕ್ಯಾಂಪಸ್) ಪರೀಕ್ಷೆ ನಡೆಯಲಿದೆ.

ಕಲ್ಯಾಣ ಕರ್ನಾಟಕ ವೃಂದ: ಬೆಂಗಳೂರು ನಗರ ವ್ಯಾಪ್ತಿಯ 171 ಹುದ್ದೆಗಳಿಗೆ 833 ಅಭ್ಯರ್ಥಿಗಳು ಅರ್ಹರಾಗಿದ್ದು, ಅ.8ರಂದು ಚಾಮರಾಜಪೇಟೆಯ ಸಿಎಆರ್ ಪರೇಡ್ ಮೈದಾನ (ಹೆಚ್‌ಕ್ಯೂ) ಹಾಗೂ ಆಡುಗೋಡಿಯ ಸಿಎಆರ್ ಪರೇಡ್ ಮೈದಾನದಲ್ಲಿ (ದಕ್ಷಿಣ) ಪರೀಕ್ಷೆ ನಡೆಯಲಿದೆ.

ಬಳ್ಳಾರಿ ವಲಯ (KK): ಕೊಪ್ಪಳ, ರಾಯಚೂರು, ಬಳ್ಳಾರಿ ಹಾಗೂ ವಿಜಯನಗರ ಘಟಕಗಳ 174 ಹುದ್ದೆಗಳಿಗೆ 869 ಅಭ್ಯರ್ಥಿಗಳು ಅರ್ಹರಾಗಿದ್ದಾರೆ. ಅ.12ರಿಂದ 15ರವರೆಗೆ ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಹೊಸಹಳ್ಳಿಯ ಕೆಎಸ್ ಆರ್‌ಪಿ ಪಿ.ಟಿ.ಎಸ್. ಮೈದಾನದಲ್ಲಿ ದೈಹಿಕ ಪರೀಕ್ಷೆ ನಡೆಯಲಿದೆ.

ಈಶಾನ್ಯ ವಲಯ: ಕಲಬುರಗಿ ನಗರ, ಕಲಬುರಗಿ ಜಿಲ್ಲೆ ಹಾಗೂ ಬೀದರ್ ಘಟಕಗಳ 251 ಹುದ್ದೆಗಳಿಗೆ 1,240 ಅಭ್ಯರ್ಥಿಗಳು ಆಯ್ಕೆಯಾಗಿದ್ದು, ಅ.12ರಿಂದ 14ರವರೆಗೆ ಕಲಬುರಗಿಯ ತಾಜ್ ಸುಲ್ತಾನ್‌ಪುರದಲ್ಲಿರುವ 6ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

ದೈಹಿಕ ಪರೀಕ್ಷೆಗೆ ಅರ್ಹತೆ ಪಡೆದ ಅಭ್ಯರ್ಥಿಗಳು ತಮ್ಮ ಕರೆಪತ್ರವನ್ನು (Call Letter) ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (KEA) ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು. ಕರೆಪತ್ರದಲ್ಲಿ ನಿಗದಿಪಡಿಸಿರುವ ದಿನಾಂಕ ಮತ್ತು ಪರೀಕ್ಷಾ ಕೇಂದ್ರಕ್ಕೆ ಅಭ್ಯರ್ಥಿಗಳು ಕಡ್ಡಾಯವಾಗಿ ಹಾಜರಾಗಬೇಕು ಎಂದು ಪೊಲೀಸ್ ನೇಮಕಾತಿ ವಿಭಾಗ ತಿಳಿಸಿದೆ.

### ರಾಜ್ಯ ಸರ್ಕಾರ ರೈತ ವಿರೋಧಿ ಧೋರಣೆ ಅನುಸರಿಸುತ್ತಿದೆ: ರಾಜಾ ವೆಂಕಟಪ್ಪನಾಯಕ

ಮಾನ್ವಿ: ರಾಜ್ಯ ಸರ್ಕಾರ ಸಂಪೂರ್ಣ ರೈತ ವಿರೋಧಿ ಧೋರಣೆ ಅನುಸರಿಸುತ್ತಿದ್ದು, ಮುಂಗಾರು ಮಳೆ ವೈಫಲ್ಯದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದರೂ ಅವರ ಸಮಸ್ಯೆಗಳಿಗೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ ಎಂದು ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕ ಆರೋಪಿಸಿದರು.

ಪಟ್ಟಣದ ಬಸವ ವೃತ್ತದಲ್ಲಿ ಜನತಾದಳ (ಜಾತ್ಯತೀತ) ಪಕ್ಷದ ಮಾನ್ವಿ ತಾಲೂಕು ಘಟಕದ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಮಾನ್ವಿ ಮತ್ತು ಸಿರವಾರ ತಾಲೂಕುಗಳಲ್ಲಿ ಮುಂಗಾರು ಮಳೆ ವೈಫಲ್ಯದಿಂದ ಬರಗಾಲದ ಪರಿಸ್ಥಿತಿ ಉಂಟಾಗಿದೆ. ಇಂತಹ ಸಂದರ್ಭದಲ್ಲಿ ರೈತರಿಗೆ ಕಾಲುವೆ ನೀರು ಒದಗಿಸುವ ನಿಟ್ಟಿನಲ್ಲಿ ಜನಪ್ರತಿನಿಧಿಗಳು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ತಾಲೂಕಿನ ರೈತರು ಬೆಳೆದ ಜೋಳವನ್ನು ಸರ್ಕಾರಕ್ಕೆ ನೀಡಿ ಒಂದು ವರ್ಷ ಕಳೆದರೂ ಹಣ ರೈತರ ಖಾತೆಗೆ ಜಮೆಯಾಗಿಲ್ಲ. ಹಣ ಪಾವತಿಸುವಂತೆ ಕೇಳಲು ಹೋದ ರೈತರ ಮೇಲೆ ದೌರ್ಜನ್ಯ ನಡೆಸಿ ಪ್ರಕರಣ ದಾಖಲಿಸಲಾಗುತ್ತಿದೆ ಎಂದು ಆರೋಪಿಸಿದ ಅವರು, ರೈತರ ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು.

ಬರಗಾಲದ ಹಿನ್ನೆಲೆಯಲ್ಲಿ ಕೂಡಲೇ ಪರಿಹಾರ ಕಾಮಗಾರಿಗಳನ್ನು ಆರಂಭಿಸಿ ರೈತರು ಮತ್ತು ಕೃಷಿ ಕೂಲಿ ಕಾರ್ಮಿಕರು ಉದ್ಯೋಗಕ್ಕಾಗಿ ವಲಸೆ ಹೋಗದಂತೆ ಅವರ ಗ್ರಾಮಗಳಲ್ಲಿಯೇ ಉದ್ಯೋಗ ಸೃಷ್ಟಿಸಬೇಕು. ಜಾನುವಾರುಗಳಿಗಾಗಿ ಗೋಶಾಲೆ ಆರಂಭಿಸಿ ಮೇವು, ಕುಡಿಯುವ ನೀರು ಹಾಗೂ ಅಗತ್ಯ ವೈದ್ಯಕೀಯ ಚಿಕಿತ್ಸೆ ಒದಗಿಸಬೇಕು. ಗ್ರಾಮೀಣ ಪ್ರದೇಶದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬರ ಸಮೀಕ್ಷೆ ನಡೆಸಿ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸುವ ಮೂಲಕ ಬರ ಪರಿಹಾರ ನಿಧಿ ಪಡೆಯಲು ಕ್ರಮ ಕೈಗೊಳ್ಳಬೇಕು. ರೈತರಿಗೆ ಅಲ್ಪಾವಧಿ ಬೆಳೆಗಳನ್ನು ಬೆಳೆಯಲು ವಿಶೇಷ ಪ್ಯಾಕೇಜ್ ಘೋಷಿಸಬೇಕು. ಬೆಳೆ ಹಾನಿ ಸಮೀಕ್ಷೆ ನಡೆಸಿ ಪ್ರತಿ ಎಕರೆಗೆ ₹50 ಸಾವಿರ ಪರಿಹಾರ ನೀಡಬೇಕು. ಗ್ರಾಮೀಣ ಪ್ರದೇಶದ ಭೂಕಂದಾಯ ಮನ್ನಾ ಮಾಡುವುದರೊಂದಿಗೆ ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು. ಬೆಳೆ ವಿಮೆ ಯೋಜನೆಯಡಿ ನೋಂದಾಯಿಸಿಕೊಂಡ ರೈತರಿಗೆ ವಿಮಾ ಕಂಪನಿಗಳಿಂದ ಪರಿಹಾರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕೇಂದ್ರದ ತುರ್ತು ಪ್ರಕೃತಿ ವಿಕೋಪ ಪರಿಹಾರ ನಿಧಿಗಾಗಿ ಕಾಯದೆ ರಾಜ್ಯ ಸರ್ಕಾರವೇ ಎಲ್ಲ ಜಿಲ್ಲಾಧಿಕಾರಿಗಳಿಗೆ ತಲಾ ₹50 ಕೋಟಿ ಅನುದಾನವನ್ನು ಬರಗಾಲ ನಿರ್ವಹಣೆಗಾಗಿ ನೀಡಬೇಕು. ರೈತರ ಪಂಪ್‌ಸೆಟ್‌ಗಳಿಗೆ ನಿರಂತರ 10 ಗಂಟೆ ವಿದ್ಯುತ್ ಪೂರೈಕೆಗೆ ಕ್ರಮ ಕೈಗೊಳ್ಳಬೇಕು. ಈ ಬೇಡಿಕೆಗಳನ್ನು ಈಡೇರಿಸದಿದ್ದರೆ ಜೆಡಿಎಸ್ ವತಿಯಿಂದ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಇದಕ್ಕೂ ಮುನ್ನ ಜೆಡಿಎಸ್ ಕಾರ್ಯಕರ್ತರು ಬಸವ ವೃತ್ತದಲ್ಲಿ ಪ್ರತಿಭಟನೆ ನಡೆಸಿ ರಸ್ತೆ ತಡೆ ನಡೆಸಿದರು. ಬಳಿಕ ನೂರಾರು ಕಾರ್ಯಕರ್ತರು ಎತ್ತಿನಗಾಡಿಯೊಂದಿಗೆ ಮೆರವಣಿಗೆಯಲ್ಲಿ ತಹಶೀಲ್ದಾರ್ ಕಚೇರಿಗೆ ತೆರಳಿ, ರಾಜ್ಯದ ಮುಖ್ಯ ಕಾರ್ಯದರ್ಶಿಗಳಿಗೆ ಸಲ್ಲಿಸುವ ಮನವಿ ಪತ್ರವನ್ನು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರ ಮೂಲಕ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಜೆಡಿಎಸ್ ರಾಜ್ಯ ಯುವ ಘಟಕದ ಉಪಾಧ್ಯಕ್ಷ ರಾಜಾ ರಾಮಚಂದ್ರನಾಯಕ, ಮಾನ್ವಿ ತಾಲೂಕು ಘಟಕದ ಅಧ್ಯಕ್ಷ ಡಾ. ಈರಣ್ಣ ಮರ್ಲಟ್ಟಿ, ಸಿರವಾರ ತಾಲೂಕು ಅಧ್ಯಕ್ಷ ಟಿ. ಮಲ್ಲಿಕಾರ್ಜುನ ಪಾಟೀಲ್ ಬಲ್ಲಟ್ಟಗಿ, ತಾಲೂಕು ರೈತ ಘಟಕದ ಅಧ್ಯಕ್ಷ ಶರಣಪ್ಪಗೌಡ ಮದ್ಲಾಪುರ, ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಸರ್ವಮಂಗಳ, ವಿಜಯಲಕ್ಷ್ಮೀ, ರಾಜಶೇಖರ ತಪ್ಪಲದೊಡ್ಡಿ, ಖಾಜಾಸಾಬ್, ನಾಗರಾಜ ಭೋಗವತಿ, ಲೋಕರೆಡ್ಡಿ, ಜಂಭೂನಾಥ ಯಾದವ್, ರವಿಕುಮಾರ ವಕೀಲರು, ಎಚ್. ಮೌನೇಶಗೌಡ, ದಾನಪ್ಪ ಸಿರವಾರ, ರಂಜೀತಕುಮಾರ, ಮಲ್ಲಪ್ಪ ಹೂಗಾರ, ವಿಜಯ ನಾಯಕ, ಬಾಷಾ ಸಾಬ್, ಶರಣಪ್ಪ ಮೇದಾ, ಜೆ.ಎಚ್. ದೇವರಾಜ, ರಾಜಾ ಆದರ್ಶನಾಯಕ, ವೆಂಕಟೇಶನಾಯಕ, ಎಂ.ಡಿ. ಉಸ್ಮಾನ್ ಸಾಬ್, ಎಂ. ಪ್ರಕಾಶ, ಬಸವನಗೌಡ ಅತ್ತನೂರು, ರುಕ್ಮುದ್ದೀನ್, ಸಣ್ಣ ಕರಿಲಿಂಗಪ್ಪ, ರಾಮಚಾರಿ, ಯಲ್ಲಪ್ಪ ನಾಯಕ, ಅಳ್ಳಪ್ಪನಾಯಕ ಜುಲ್ಪಿ, ಖಾಸಿಂಸಾಬ್, ಸುಭಾನ್ ಬೇಗ್, ಜಸ್ವಂತ್ ಸೇಠ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸೆ.27 ರಂದು ರಾಷ್ಟ್ರಕೂಟ ಸಾರ್ವಭೌಮರ ಕೃತಿ ಜನಾರ್ಪಣೆ ಸಮಾರಂಭ



ರಾಯಚೂರು: ಹಿರಿಯ ಸಾಹಿತಿ ಬಶೀರ್ ಅಹ್ಮದ್ ಹೊಸಮನಿ ಅವರ ಐತಿಹಾಸಿಕ ನಾಟಕ ರಾಷ್ಟ್ರಕೂಟ ಸಾರ್ವಭೌಮರು ಕೃತಿಯ ಜನಾರ್ಪಣೆ ಸಮಾರಂಭವನ್ನು ಸೆ.27 ರಂದು ನಗರದ ಕನ್ನಡ ಭವನದಲ್ಲಿ ಆಯೋಜಿಸಲಾಗಿದೆ ಎಂದು ಕಾರ್ಯಕ್ರಮದ ಗೌರವ ಕೋಶಾಧ್ಯಕ್ಷೆ ಪ್ರತಿಭಾ ಗೋನಾಳ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಹೊಸಮನಿ ಪ್ರಕಾಶನ ರಾಯಚೂರು ಇವರ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಲಿದೆ. ಅಂದು ಬೆಳಿಗ್ಗೆ 11.30ಕ್ಕೆ ಸಮಾರಂಭ ಆರಂಭವಾಗಲಿದೆ ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ ಉದ್ಘಾಟಿಸಲಿದ್ದು, ಯುವ ಕವಿಗಳು ಹಾಗೂ ಸಾಹಿತಿಗಳಾದವೇಣುಜಾಲಿಬೆಂಚಿಕೃತಿಲೋಕಾರ್ಪಣೆ ಮಾಡಲಿದ್ದಾರೆ. ಸಾಹಿತಿ ಸವರ್ಮಂಗಳ ಒತ್ತೂರು ಕೃತಿ ಪರಿಚಯ ಮಾಡಿಕೊಡಲಿದ್ದಾರೆ. ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಬಿ. ವಿಜಯ ರಾಜೇಂದ್ರ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಸಾಹಿತಿಗಳು, ವಿದ್ವಾಂಸರು ಹಾಗೂ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಲಿದ್ದು, ಸಾಹಿತ್ಯಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಪ್ರತಿಭಾ ಗೋನಾಳ್ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಬಶೀರ್ ಅಹ್ಮದ್ ಹೊಸಮನಿ (ಹೊಸಮನಿ ಪ್ರಕಾಶನ, ರಾಯಚೂರು), ರಫೀಕ್ ಅಹ್ಮದ್, ರಾಮಣ್ಣ ಮೈರ್ದ್, ಎಂ. ವೀರಭದ್ರಯ್ಯ ಸ್ವಾಮಿ ಹಾಗೂ ಮಹಿಂದರ್ ಸಿಂಗ್ ಉಪಸ್ಥಿತರಿದ್ದರು.

# ಸುಡುಗಾಡು ಸಿದ್ಧರ ಕಾಲೋನಿಗೆ ಮೂಲಸೌಕರ್ಯ ಕಲ್ಪಿಸಿ: ಅಲೆಮಾರಿ ಜಾಗೃತ ಸಂಘ ಒತ್ತಾಯ



ಹಟ್ಟಿ ಚಿನ್ನದ ಗಣಿ, ಸೆ.25: ಪಟ್ಟಣ ಪಂಚಾಯತ್ ವ್ಯಾಪ್ತಿಯ ಪಾಮನಕಲ್ಲೂರು ಕ್ರಾಸ್ ಸಮೀಪದ ಬಸವ ಜ್ಯೋತಿ ನಗರದಲ್ಲಿ ಕಳೆದ ಸುಮಾರು 30 ವರ್ಷಗಳಿಂದ ವಾಸಿಸುತ್ತಿರುವ ಸುಡುಗಾಡು ಸಿದ್ಧ ಸಮುದಾಯದ ನಿವಾಸಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ತುರ್ತಾಗಿ ಕಲ್ಪಿಸಬೇಕು ಎಂದು ಅಲೆಮಾರಿ ಜಾಗೃತ ಸಂಘ ಒತ್ತಾಯಿಸಿದೆ.

ಈ ಸಂಬಂಧ ಸಂಘದ ಅಧ್ಯಕ್ಷ ಬಸವರಾಜ ಹಟ್ಟಿ ಹಾಗೂ ಉಪಾಧ್ಯಕ್ಷ ಗಂಗಾಧರ್ ಶಂಖು ನೇತೃತ್ವದ ನಿಯೋಗವು ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿತು. ಮನವಿ ಸ್ವೀಕರಿಸಿದ ಪಂಚಾಯತ್ ಕರ ವಸೂಲಿ ಅಧಿಕಾರಿ ಅಕ್ರಮ್ ಅವರು, ವಾರದೊಳಗೆ ಸಮಸ್ಯೆಗಳನ್ನು ಮೇಲಾಧಿಕಾರಿಗಳ ಗಮನಕ್ಕೆ ತಂದು ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಪರಿಶಿಷ್ಟ ಜಾತಿಯ ಅಲೆಮಾರಿ ಪಟ್ಟಿಗೆ ಸೇರಿದ ಸುಡುಗಾಡು ಸಿದ್ಧ ಸಮುದಾಯದವರು ಬಸವ ಜ್ಯೋತಿ ನಗರದಲ್ಲಿ ಸುಮಾರು ಮೂರು ದಶಕಗಳಿಂದ ನೆಲೆಸಿದ್ದಾರೆ. ಆದರೆ ಇಂದಿಗೂ ಕಾಲೋನಿಯಲ್ಲಿ ಅಗತ್ಯ ಮೂಲಸೌಕರ್ಯಗಳ ಕೊರತೆ ಮುಂದುವರಿದಿದ್ದು, ಮಕ್ಕಳು, ಮಹಿಳೆಯರು ಹಾಗೂ ವೃದ್ಧರು ಸೇರಿದಂತೆ ನಿವಾಸಿಗಳು ನಿತ್ಯ ತೊಂದರೆ ಅನುಭವಿಸುತ್ತಿದ್ದಾರೆ ಎಂದು ನಿಯೋಗ ದೂರಿತು.

ಕುಡಿಯುವ ನೀರು, ಮಹಿಳಾ ಶೌಚಾಲಯ, ಚರಂಡಿ ವ್ಯವಸ್ಥೆ, ಗುಮ್ಮಿ ದುರಸ್ತಿ, ಸೊಳ್ಳೆ ನಿಯಂತ್ರಣ, ಬೀದಿ ದೀಪಗಳ ಅಳವಡಿಕೆ ಹಾಗೂ ರಸ್ತೆ ಬದಿಯಲ್ಲಿ ಬೆಳೆದಿರುವ ಗಿಡಗಂಟಿಗಳ ತೆರವು ಸೇರಿದಂತೆ ಹಲವು ಸಮಸ್ಯೆಗಳಿಗೆ ತಕ್ಷಣ ಪರಿಹಾರ ಕಲ್ಪಿಸಬೇಕಾಗಿದೆ. ಇವು ಸಾರ್ವಜನಿಕ ಆರೋಗ್ಯ, ಸ್ವಚ್ಛತೆ ಹಾಗೂ ನಿವಾಸಿಗಳ ಸುರಕ್ಷತೆಗೆ ನೇರವಾಗಿ ಸಂಬಂಧಿಸಿದ ಸಮಸ್ಯೆಗಳಾಗಿವೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಬಸವ ಜ್ಯೋತಿ ನಗರಕ್ಕೆ ಖುದ್ದಾಗಿ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಬೇಕು. ತುರ್ತು ಸಮಸ್ಯೆಗಳನ್ನು ಒಂದು ವಾರದೊಳಗೆ ಹಾಗೂ ಉಳಿದ ಮೂಲಭೂತ ಸಮಸ್ಯೆಗಳನ್ನು ಗರಿಷ್ಠ 15 ದಿನಗಳೊಳಗೆ ಪರಿಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಸಂಘ ಆಗ್ರಹಿಸಿದೆ.

ನಿವಾಸಿಗಳ ಸಮಸ್ಯೆಗಳಿಗೆ ನಿಗದಿತ ಅವಧಿಯಲ್ಲಿ ಸ್ಪಂದಿಸದಿದ್ದರೆ, ಸಾರ್ವಜನಿಕರ ಮೂಲಭೂತ ಹಕ್ಕುಗಳಿಗಾಗಿ ಸಂಬಂಧಪಟ್ಟ ಮೇಲಾಧಿಕಾರಿಗಳ ಗಮನಕ್ಕೆ ವಿಷಯವನ್ನು ಕೊಂಡೊಯ್ಯಲಾಗುವುದು. ಅಗತ್ಯಬಿದ್ದರೆ ಪಟ್ಟಣ ಪಂಚಾಯತ್ ಕಚೇರಿ ಎದುರು ಬೃಹತ್‌ಪ್ರತಿಭಟನೆಸೇರಿದಂತೆಕಾನೂನುಬದ್ಧಹಾಗೂ ಶಾಂತಿಯುತ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸಂಘದ ಪದಾಧಿಕಾರಿಗಳು ಎಚ್ಚರಿಸಿದರು.

ನಿಯೋಗದಲ್ಲಿ ನಿವಾಸಿಗಳಾದ ಮಲ್ಲಿಕಾರ್ಜುನ ಶಂಖು, ಈರೇಶ (ಚಿಟ್ಟಿ), ರವಿಕುಮಾರ್, ಗೋಪಾಲ, ಶೇಖರ್, ನಾಗಲಿಂಗ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪರಿಸರ ಸಂರಕ್ಷಣೆಗೆ ಸಸಿ ನೆಡುವ ಸಂಕಲ್ಪ ಅಗತ್ಯ: ಆನಂದಪ್ಪ ಮಾಡಗಿರಿ



ಸಿರವಾರ: ತಾಲೂಕಿನ ತುಪ್ಪದೂರು ಕೆ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಗುರುವಾರ ಸರ್ವಶಕ್ತ ಬ್ಲೆಸ್ಸಿಂಗ್ ಟ್ರಸ್ಟ್ ವತಿಯಿಂದ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಟ್ರಸ್ಟ್‌ನ ಗೌರವಾಧ್ಯಕ್ಷ ಆನಂದಪ್ಪ ಮಾಡಗಿರಿ ಅವರು ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಇಂದು ನೆಡುವ ಪ್ರತಿಯೊಂದು ಸಸಿಯೂ ಭವಿಷ್ಯದಲ್ಲಿ ಶುದ್ಧ ಗಾಳಿ, ನೆರಳು ಹಾಗೂ ಆರೋಗ್ಯಕರ ವಾತಾವರಣವನ್ನು ಒದಗಿಸುತ್ತದೆ. ಕೇವಲ ಸಸಿ ನೆಡುವುದರಿಂದ ಪರಿಸರ ಸಂರಕ್ಷಣೆ ಸಾಧ್ಯವಿಲ್ಲ. ನೆಟ್ಟ ಸಸಿಗಳನ್ನು ನಿರಂತರವಾಗಿ ಪೋಷಿಸಿ, ಮರಗಳಾಗಿ ಬೆಳೆಸುವ ಜವಾಬ್ದಾರಿಯನ್ನೂ ವಹಿಸಿಕೊಳ್ಳಬೇಕು ಎಂದು ಹೇಳಿದರು.

ಹಸಿರು ಪರಿಸರ ಉತ್ತಮ ಆರೋಗ್ಯಕ್ಕೆ ಪೂರಕವಾಗಿದೆ. ಹೀಗಾಗಿ ಪ್ರತಿಯೊಬ್ಬರೂ ತಮ್ಮ ಮನೆ, ಶಾಲೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಾಧ್ಯವಾದಷ್ಟು ಗಿಡಗಳನ್ನು ನೆಟ್ಟು ಅವುಗಳ ಸಂರಕ್ಷಣೆಗೆ ಆದ್ಯತೆ ನೀಡಬೇಕು. ವಿದ್ಯಾರ್ಥಿಗಳಲ್ಲಿಯೂ ಪರಿಸರದ ಮಹತ್ವ ಹಾಗೂ ಗಿಡಮರಗಳ ಸಂರಕ್ಷಣೆಯ ಕುರಿತು ಅರಿವು ಮೂಡಿಸುವುದು ಅಗತ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಶಿವಲಿಂಗ ನಾಯಕ, ಗ್ರಾಮದ ಹಿರಿಯರಾದ ಮಲ್ಲಣ್ಣ ಆಚಾರ್ಯ, ಪಂಪಣ್ಣ ನಾಯಕ, ಭೀಮಯ್ಯ ಛಲವಾದಿ, ಪ್ರಗತಿಪರ ರೈತ ಮುಖಂಡರಾದ ಇಟ್ಟೋಬ, ಯಲ್ಲಪ್ಪ ನಾಯಕ, ಬಸನಗೌಡ ನಾಯಕ, ಅತಿಥಿ ಶಿಕ್ಷಕ ಕೆ. ಶಿವಪ್ಪ ನಾಯಕ ಕಲ್ಲೂರು ಸೇರಿದಂತೆ ಶಾಲೆಯ ಅಡುಗೆ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅಂತರ್ ಕಾಲೇಜು ಚೆಸ್ ಪಂದ್ಯಾವಳಿ: ವಿಶ್ವವಿದ್ಯಾನಿಲಯ ತಂಡಕ್ಕೆ ಆಯ್ಕೆ ಪ್ರಕ್ರಿಯೆ



ರಾಯಚೂರು: ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೆಚ್.ಸಿ.ಎಂ.ಎಸ್.ಕೆ. ಶಿಕ್ಷಣ ಮಹಾವಿದ್ಯಾಲಯ ಹಾಗೂ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಸಂಯುಕ್ತ ಆಶ್ರಯದಲ್ಲಿ 202627ನೇ ಸಾಲಿನ ಅಂತರ್ ಕಾಲೇಜು ಮಟ್ಟದ ಪುರುಷ ಮತ್ತು ಮಹಿಳಾ ಚೆಸ್ ಪಂದ್ಯಾವಳಿ ಹಾಗೂ ವಿಶ್ವವಿದ್ಯಾನಿಲಯ ತಂಡದ ಆಯ್ಕೆ ಪ್ರಕ್ರಿಯೆ ನಡೆಯಿತು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ನಿರ್ದೇಶಕ ಮಲ್ಲಿಕಾರ್ಜುನ ನಾಯಕ ಮಾತನಾಡಿ, ಚದುರಂಗವು ಕೇವಲ ಕ್ರೀಡೆಯಾಗಿರದೆ ವಿದ್ಯಾರ್ಥಿಗಳ ಬೌದ್ಧಿಕ ಸಾಮರ್ಥ್ಯವನ್ನು ವೃದ್ಧಿಸುವ ಮಹತ್ವದ ಆಟವಾಗಿದೆ. ಚೆಸ್ ಆಡುವುದರಿಂದ ಏಕಾಗ್ರತೆ, ತಾಳ್ಮೆ, ಯೋಚನಾ ಶಕ್ತಿ ಹಾಗೂ ಸೂಕ್ತ ಸಮಯದಲ್ಲಿ ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ ಬೆಳೆಯುತ್ತದೆ. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಪಂದ್ಯಾವಳಿಯ ಮುಖ್ಯ ನಿರ್ಣಾಯಕರಾಗಿ ಆಗಮಿಸಿದ್ದ ಶ್ರೀ ವರ್ಧಮಾನ್ ಶಾಲೆಯ ದೈಹಿಕ ಶಿಕ್ಷಕ ಹನುಮಂತ ಅವರು, ಚದುರಂಗದ ನಿಯಮಗಳು, ಆಟದ ತಂತ್ರಗಾರಿಕೆ ಹಾಗೂ ಸ್ಪರ್ಧಿಗಳು ಗಮನಿಸಬೇಕಾದ ಪ್ರಮುಖ ಅಂಶಗಳ ಕುರಿತು ಮಾಹಿತಿ ನೀಡಿದರು. ಉತ್ತಮ ಪ್ರದರ್ಶನ ನೀಡಲು ಏಕಾಗ್ರತೆ, ತಾಳ್ಮೆ ಹಾಗೂ ಪೂರ್ವಯೋಜನೆ ಅತ್ಯಂತ ಮುಖ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಮಂಜುನಾಥ್ ಪಾಟೀಲ್ ವೊಟ್ಟಿಲ್ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯಲ್ಲಿ ಕ್ರೀಡೆಗಳ ಪಾತ್ರ ಮಹತ್ವದ್ದಾಗಿದೆ. ಚದುರಂಗದಂತಹ ಬೌದ್ಧಿಕ ಕ್ರೀಡೆಗಳು ವಿದ್ಯಾರ್ಥಿಗಳಲ್ಲಿ ಚಿಂತನಾ ಸಾಮರ್ಥ್ಯ, ಆತ್ಮವಿಶ್ವಾಸ, ಸಮಯಪ್ರಜ್ಞೆ ಹಾಗೂ ಸಮಸ್ಯೆ ಪರಿಹರಿಸುವ ಕೌಶಲ್ಯವನ್ನು ಬೆಳೆಸುತ್ತವೆ. ಈ ಪಂದ್ಯಾವಳಿಯ ಮೂಲಕ ಪ್ರತಿಭಾವಂತ ಆಟಗಾರರನ್ನು ಗುರುತಿಸಿ ವಿಶ್ವವಿದ್ಯಾನಿಲಯ ತಂಡಕ್ಕೆ ಆಯ್ಕೆ ಮಾಡಲಾಗುವುದು ಎಂದು ತಿಳಿಸಿದರು.

ಪಂದ್ಯಾವಳಿಯಲ್ಲಿ ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ಪುರುಷ ಮತ್ತು ಮಹಿಳಾ ವಿಭಾಗದ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು, ಚದುರಂಗದ ಬೋರ್ಡ್‌ನಲ್ಲಿ ತಮ್ಮ ಕೌಶಲ್ಯ ಹಾಗೂ ತಂತ್ರಗಾರಿಕೆಯನ್ನು ಪ್ರದರ್ಶಿಸಿದರು. ಉತ್ತಮ ಪ್ರದರ್ಶನ ನೀಡಿದ ಆಟಗಾರರನ್ನು ಗುರುತಿಸಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ತಂಡಕ್ಕೆ ಆಯ್ಕೆ ಮಾಡುವ ಪ್ರಕ್ರಿಯೆ ನಡೆಸಲಾಯಿತು.

ಈ ಸಂದರ್ಭದಲ್ಲಿ ದೈಹಿಕ ಶಿಕ್ಷಣ ನಿರ್ದೇಶಕರಾದ ಡಾ. ತಾಯಮ್ಮ, ಸಂಪತ್ ಅಂಗಡಿ, ಭೀಮಪ್ಪ, ಹೆಚ್.ಸಿ.ಎಂ.ಎಸ್.ಕೆ. ಶಿಕ್ಷಣ ಮಹಾವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕ ಶಶಿಕುಮಾರ್ ಸೇರಿದಂತೆ ವಿವಿಧ ಕಾಲೇಜುಗಳ ದೈಹಿಕ ಶಿಕ್ಷಣ ನಿರ್ದೇಶಕರು, ಪ್ರತಿನಿಧಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅಂಜುಮನ್ ಕಮಿಟಿಯಿಂದ ಪ್ರೋತ್ಸಾಹ



ಲಿಂಗಸಗೂರು: ಹಜರತ್ ಮೊಹಮ್ಮದ್ ಪೈಗಂಬರ್ (ಸ) ಅವರ ಪವಿತ್ರ ಜನ್ಮದಿನದ ಪ್ರಯುಕ್ತ ಅಂಜುಮನ್-ಎ-ಮುಸ್ಲಿಮೀನ್ ಲಿಂಗಸಗೂರು ತಾಲೂಕು ಕಮಿಟಿ ವತಿಯಿಂದ ಪಟ್ಟಣದ ಸಹಬಾ ಮಸ್ಜಿದ್‌ನ ಮಕ್ತಬ್‌ನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬ್ಯಾಗ್, ಬೂಟು, ಪುಸ್ತಕ ಹಾಗೂ ಪೆನ್ನು ಸೇರಿದಂತೆ ವಿವಿಧ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಿಸಲಾಯಿತು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಉತ್ತೇಜನ ನೀಡುವುದರ ಜೊತೆಗೆ ಅವರಲ್ಲಿ ಶಿಕ್ಷಣದ ಬಗ್ಗೆ ಹೆಚ್ಚಿನ ಆಸಕ್ತಿ ಮೂಡಿಸುವ ಉದ್ದೇಶದಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಕ್ತಬ್‌ನ ಎಲ್ಲ ವಿದ್ಯಾರ್ಥಿಗಳಿಗೆ ಅಗತ್ಯ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಂಜುಮನ್-ಎ-ಮುಸ್ಲಿಮೀನ್ ಲಿಂಗಸಗೂರು ತಾಲೂಕು ಕಮಿಟಿ ಅಧ್ಯಕ್ಷ ಹುಸೇನ್ ಭಾಷಾ, ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಮಕ್ತಬ್ ಶಿಕ್ಷಣದ ಜೊತೆಗೆ ಶಾಲಾ ಶಿಕ್ಷಣಕ್ಕೂ ವಿದ್ಯಾರ್ಥಿಗಳು ಹೆಚ್ಚಿನ ಆದ್ಯತೆ ನೀಡಬೇಕು. ಆರ್ಥಿಕ ಅಥವಾ ಇತರ ಕಾರಣಗಳಿಂದ ಯಾವುದೇ ವಿದ್ಯಾರ್ಥಿಯ ಶಿಕ್ಷಣಕ್ಕೆ ತೊಂದರೆಯಾಗಬಾರದು ಎಂಬ ಉದ್ದೇಶದಿಂದ ಕಮಿಟಿ ಇಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ಹೇಳಿದರು.

ಇಂದಿನ ಮಕ್ಕಳೇ ನಾಳಿನ ಸಮಾಜದ ಭವಿಷ್ಯವಾಗಿದ್ದು, ಅವರ ಶಿಕ್ಷಣ ಹಾಗೂ ಉತ್ತಮ ಭವಿಷ್ಯ ರೂಪಿಸಲು ಸಮುದಾಯದ ಹಿರಿಯರು ಮತ್ತು ಸಂಘ-ಸಂಸ್ಥೆಗಳು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು. ಮಕ್ಕಳಲ್ಲಿ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ, ಶಿಸ್ತು ಹಾಗೂ ಸಾಮಾಜಿಕ ಜವಾಬ್ದಾರಿಯ ಮನೋಭಾವ ಬೆಳೆಸುವುದು ಅಗತ್ಯವಾಗಿದೆ. ಮುಂದಿನ ದಿನಗಳಲ್ಲಿಯೂ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅಗತ್ಯ ಸಹಕಾರ ನೀಡಲು ಕಮಿಟಿ ಸದಾ ಸಿದ್ಧವಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಅಗತ್ಯ ನೆರವು ನೀಡುವ ಮೂಲಕ ಸಮುದಾಯದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುವುದು ಅಂಜುಮನ್-ಎ-ಮುಸ್ಲಿಮೀನ್ ತಾಲೂಕು ಕಮಿಟಿಯ ಪ್ರಮುಖ ಸಾಮಾಜಿಕ ಕಾಳಜಿಗಳಲ್ಲಿ ಒಂದಾಗಿದೆ ಎಂದು ಕಮಿಟಿಯ ಪದಾಧಿಕಾರಿಗಳು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಹಬಾ ಮಸ್ಜಿದ್ ಕಮಿಟಿಯ ಖಜಾಂಚಿ ಇಮಾಮ್ ಸಾಬ್, ಹಾಫಿಜ್ ಸಮೀರ್ ಸಾಬ್, ಹಾಫಿಜ್ ಚಾಂದ್ ಪಾಷಾ ಸಾಬ್, ಗುಲ್ಲು ಮಾಮು, ಇಕ್ಬಾಲ್ ಮೌಜ್ಜನ್ ಸಾಬ್, ಅಮೀನುದ್ದಿನ್ ರೆಡಿಯಟರ್, ಅಬ್ದುಲ್, ಇಮ್ತಿಯಾಜ್, ದಾದಾಪೀರ್, ಜಾವೀದ್ ಹಾಗೂ ಅಂಜುಮನ್-ಎ-ಮುಸ್ಲಿಮೀನ್ ತಾಲೂಕು ಕಮಿಟಿಯ ಗೌರವಾಧ್ಯಕ್ಷ ಅನ್ಸರುದ್ದಿನ್, ಅಧ್ಯಕ್ಷ ಹುಸೇನ್ ಭಾಷಾ, ಉಪಾಧ್ಯಕ್ಷ ಮುಸ್ತಫಾ, ಪ್ರಧಾನ ಕಾರ್ಯದರ್ಶಿ ಸಲೀಂ ಪಾಷಾ ಕಾರ್ಪೆಂಟರ್, ವಸೀಂ ಪಾಷಾ, ಕಲೀಂ ಭಾಯಿ, ಅಮೀನುದ್ದಿನ್ ಟೈಲರ್, ರೋಹಿತ್ ಭಾಯಿ, ಪಾಪು, ವಸೀಂ ಅಕ್ರಂ, ಶೇಖ್ ಅಲಿ, ನಸೀಮ್, ಅಲ್ಲಾಬಕ್ಷ, ಉಬೆದ್ ಚೌಧ್ರಿ, ಆರೀಫ್, ಆಸೀಫ್, ಆದಿಲ್, ಉಮರ್, ಸದ್ದಾಂ, ಅಬ್ಬಾಸ್, ಅಜ್ಮೀರ್, ಕೈಫ್ ಮೊಹಮ್ಮದ್ ಸೇರಿದಂತೆ ಕಮಿಟಿಯ ಪದಾಧಿಕಾರಿಗಳು ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ಹಿಂಗಾರು ಹಂಗಾಮಿನಲ್ಲಿ ಸೂಕ್ತ ಬೆಳೆ ಬೆಳೆಯಲು ಸಲಹೆ

ಕೊಪ್ಪಳ, ಸೆಪ್ಟೆಂಬರ್ 25(ಕರ್ನಾಟಕ ವಾರ್ತೆ): ಹಿಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಸೂಕ್ತವಾದ ಬೆಳೆಗಳನ್ನು ಬೆಳೆಯುವಮತೆ ಕೃಷಿ ಇಲಾಖೆ ಸಲಹೆಗಳನ್ನು ನೀಡಿದೆ.

ಪ್ರಸ್ತುತ ಹಿಂಗಾರು ಹಂಗಾಮು ಪ್ರಾರಂಭವಾಗಿದ್ದು, ಕೊಪ್ಪಳ ಜಿಲ್ಲೆಯಲ್ಲಿ ಕಳೆದ 23 ದಿನಗಳಿಂದ ಅಲ್ಲಲ್ಲಿ ಮಳೆಯಾಗುತ್ತಿದೆ. ವಾಡಿಕೆಯಂತೆ ಮಳೆಯಾದಲ್ಲಿ ರೈತಬಾಂಧವರು ಹಿಂಗಾರು ಹಂಗಾಮಿಗೆ ಸೂಕ್ತವಾದ ಜೋಳ, ಕಡಲೆ, ಕುಸುಬೆ, ಸೂರ್ಯಕಾಂತಿ, ಶೇಂಗಾ ಇತ್ಯಾದಿ ಬೆಳೆಗಳ ಸುಧಾರಿತ ತಳಿಗಳ ಬೀಜಗಳನ್ನು ಬಿತ್ತನೆಗೆ ಬಳಸಬಹುದು.

ಹಿಂಗಾರು ಹಗಾಮಿನ ಜೋಳ ಬೆಳೆಯಲ್ಲಿ ಎ.ಎಸ್.-35-1 ಮತ್ತು ಕೃಷಿ ವಿಶ್ವವಿದ್ಯಾಲಯ, ರಾಯಚೂರಿನಿಂದ ಬಿಡುಗಡೆ ಮಾಡಲಾದ ತುಕ್ಕು ರೋಗಕ್ಕೆ ನಿರೋಧಕತೆ ಹಾಗೂ ಹೆಚ್ಚಿನ ಕಾಳು ಉತ್ಪಾದನಾ ಸಾಮರ್ಥ್ಯ ಹೊಂದಿರುವ ಜಿ.ಎಸ್.-23 ಮತ್ತು ಆರ್.ಟಿ.ಎಸ್.-43 (ದ್ವಿಉದ್ದೇಶದ ತಳಿ, ಅಧಿಕ ಕಾಳು, ಗುಣಮಟ್ಟದ ಮೇವು ಹಾಗೂ ಇಡ್ಡಿಲು ಕಾಂಡಕೊಳೆ, ಸೊರಗು ರೋಗ ಹಾಗೂ ತುಕ್ಕುರೋಗ ನಿರೋಧಕ ಶಕ್ತಿ ಹೊಂದಿರುವ) ತಳಿಗಳನ್ನು ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 15 ರವರೆಗೆ ಬಿತ್ತನೆಗೆ ಬಳಸಬಹುದು.

ಕಡಲೆ ಬೆಳೆಯಲ್ಲಿ ಸುಧಾರಿತ ತಳಿಗಳಾದ ಎನ್.ಬಿ.ಇ.ಜಿ-47, ಜಿ.ಜಿ.-11, ಬಿ.ಜಿ.ಡಿ.-103 (ದಪ್ಪಕಾಳಿನ ದೇಶಿತಳಿ), ಬಿ.ಜಿ.ಡಿ.-111/1 (ಬರ ಪ್ರತಿರೋಧ ಹಾಗೂ ಸೊರಗು ರೋಗ ನಿರೋಧಕಶಕ್ತಿ ಹೊಂದಿರುವ), ಕೆ.ಸಿ.ಡಿ.-11 (ಸೊರಗು ರೋಗ ನಿರೋಧಕ ಶಕ್ತಿ ಹೊಂದಿರುವ ದೇಶಿತಳಿ) ಹಾಗೂ ಕೆ.ಸಿ.ಡಿ.-134 (ಮಧ್ಯಮ ಅವಧಿಯ, ಸೊರಗು ರೋಗ ನಿರೋಧಕ ಶಕ್ತಿ ಹಾಗೂ ಅಧಿಕ ಇಳುವರಿ ಹೊಂದಿರುವ) ತಳಿಗಳನ್ನು ಅಕ್ಟೋಬರ್‌ನವೆಂಬರ್ ಅವಧಿಯಲ್ಲಿ ಬಿತ್ತನೆ ಮಾಡಬಹುದು.

ಶೇಂಗಾ ಬೆಳೆಯಲ್ಲಿ ಧರಣಿ ಮತ್ತು ಡಿ.ಎಚ್.-256 ತಳಿಗಳನ್ನು ಬಿತ್ತನೆ ಮಾಡಬಹುದು. ಕುಸುಬೆ ಬೆಳೆಯಲ್ಲಿ ಎ-1, ಐ.ಎಸ್.ಎಫ್.-764 (ಬರನಿರೋಧಕ, ಸೊರಗು ರೋಗ ಹಾಗೂ ಎಲೆಚುಕ್ಕೆ ರೋಗಕ್ಕೆ ಮಧ್ಯಮ ನಿರೋಧಕಶಕ್ತಿ ಹೊಂದಿರುವ) ಹಾಗೂ ಎ-2020 (ಬರನಿರೋಧಕ ಹಾಗೂ ಹೆಚ್ಚಿನ ದ್ವಿತೀಯ ಕವಲುಗಳನ್ನು ಹೊಂದಿರುವ) ತಳಿಗಳನ್ನು ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 15 ರವರೆಗೆ ಬಿತ್ತನೆ ಮಾಡಬಹುದು.

ಸೂರ್ಯಕಾಂತಿ ಬೆಳೆಯಲ್ಲಿ ಆರ್.ಎಸ್.ಎಫ್.ಎಚ್.-1887 ಹಾಗೂ ಆರ್.ಎಸ್.ಎಫ್.ಎಚ್.-700 ಸಂಕರಣ ತಳಿಗಳನ್ನು ಸೆಪ್ಟೆಂಬರ್ ಮತ್ತು ಅಕ್ಟೋಬರ್ ತಿಂಗಳಿನಲ್ಲಿ ಬಿತ್ತನೆ ಮಾಡಬಹುದು. ಗುರೆಳ್ಳು ಬೆಳೆಯನ್ನು ಅಕ್ಟೋಬರ್ ತಿಂಗಳಿನಲ್ಲಿ ಬಿತ್ತನೆ ಮಾಡಬಹುದು. ಅಗಸೆ ಬೆಳೆಯಲ್ಲಿ ಎನ್.ಎಲ್.-155 ತಳಿಯನ್ನು ಅಕ್ಟೋಬರ್ 15 ರಿಂದ ನವೆಂಬರ್ 15 ರವರೆಗೆ ಬಿತ್ತನೆ ಮಾಡಬಹುದು.

ನೀರಾವರಿ ಸೌಲಭ್ಯವಿರುವ ಪ್ರದೇಶಗಳಲ್ಲಿ ಮೆಕ್ಕೆಜೋಳದ ಸಂಕರಣ ತಳಿಗಳನ್ನು ಹಾಗೂ ತರಕಾರಿ ಮತ್ತು ಸೊಪ್ಪುಗಳನ್ನೂ ಸಹ ಬೆಳೆಯಬಹುದು.

ಬರ ನಿರೋಧಕತೆಯನ್ನು ಹೆಚ್ಚಿಸಲು ಬಿತ್ತನೆ ಪೂರ್ವದಲ್ಲಿ ಶೇ. 2 ರ ಕ್ಯಾಲ್ಸಿಯಂ ಕ್ಲೋರೈಡ್ ದ್ರಾವಣದಲ್ಲಿ ಬೀಜಗಳನ್ನು ನೆನೆಸಬಹುದು. ಜೋಳದ ಬೀಜಗಳನ್ನು 8 ಗಂಟೆ, ಕುಸುಬೆ ಬೀಜಗಳನ್ನು 12 ಗಂಟೆ ಹಾಗೂ ಕಡಲೆ ಬೀಜಗಳನ್ನು 1 ಗಂಟೆ ನೆನೆಸಿದ ನಂತರ ನೆರಳಿನಲ್ಲಿ ಒಣಗಿಸಿ ಬಿತ್ತನೆ ಮಾಡಬೇಕು. ಬಿತ್ತನೆ ಪೂರ್ವದಲ್ಲಿ ಏಕದಳ ಧಾನ್ಯ ಬೆಳೆಗಳಿಗೆ ಅಜೋಸ್ಪಿರಿಲಮ್, ದ್ವಿದಳ ಧಾನ್ಯ ಬೆಳೆಗಳಿಗೆ ರೈಜೋಬಿಯಮ್ ಹಾಗೂ ಎಲ್ಲಾ ಬೆಳೆಗಳಿಗೆ ಪಿ.ಎಸ್.ಬಿ. ಜೈವಿಕ ಗೊಬ್ಬರಗಳನ್ನು ಬಳಸಿ, ಜೊತೆಗೆ ಟ್ರೈಕೋಡರ್ಮಾ ಜೈವಿಕ ಶಿಲೀಂಧ್ರನಾಶಕವನ್ನು (4 ಗ್ರಾಂ. ಪ್ರತಿ ಕೆ.ಜಿ. ಬೀಜಕ್ಕೆ) ಬೀಜೋಪಚಾರ ಮಾಡುವುದರಿಂದ ಬೆಳೆಗಳ ಆರಂಭಿಕ ಹಂತದಲ್ಲಿ ಉಂಟಾಗುವ ರೋಗಗಳನ್ನು ತಡೆಗಟ್ಟಬಹುದು. ಅಲ್ಲದೇ, ರಾಸಾಯನಿಕ ಗೊಬ್ಬರಗಳ ಬಳಕೆಯನ್ನು ಸುಮಾರು ಶೇ. 25 ರಷ್ಟು ಕಡಿಮೆ ಮಾಡಬಹುದು.

ಹೆಚ್ಚಿನ ಮಾಹಿತಿ, ವಿವರಗಳಿಗಾಗಿ ರೈತರು ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.29 ರಂದು ಕೊಪ್ಪಳದಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ

ಕೊಪ್ಪಳ, ಸೆಪ್ಟೆಂಬರ್ 25(ಕರ್ನಾಟಕ ವಾರ್ತೆ): ಕೊಪ್ಪಳ ಜೆಸ್ಕಾಂ ಕಾರ್ಯ ಮತ್ತು ಪಾಲನಾ ವೃತ್ತ ಕಚೇರಿ ವ್ಯಾಪ್ತಿಗೆ ಒಳಪಡುವ ಜಿಲ್ಲೆಯ ಇ.ಎಚ್.ಟಿ/ಎಚ್.ಟಿ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಸೆಪ್ಟೆಂಬರ್ 29 ರಂದು ಬೆಳಿಗ್ಗೆ 11.30 ಗಂಟೆಗೆ ಅಧೀಕ್ಷಕ ಅಭಿಯಂತರರು(ವಿ), ಕಾರ್ಯ ಮತ್ತು ಪಾಲನಾ ವೃತ್ತ ಕಚೇರಿ, ಜೆಸ್ಕಾಂ, ಕೊಪ್ಪಳ ರವರ ಅಧ್ಯಕ್ಷತೆಯಲ್ಲಿ ಕಾರ್ಯ ಮತ್ತು ಪಾಲನಾ ವೃತ್ತ ಜೆಸ್ಕಾಂ, ಕೊಪ್ಪಳದಲ್ಲಿ ಏರ್ಪಡಿಸಲಾಗಿದೆ.

ಈ ಸಭೆಯಲ್ಲಿ ಎಲ್ಲಾ ಇ.ಎಚ್.ಟಿ/ಎಚ್.ಟಿ ವಿದ್ಯುತ್ ಗ್ರಾಹಕರು ಹಾಜರಾಗಿ ವಿದ್ಯುತ್‌ಗೆ ಸಂಬಧಿಸಿದ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದು ಎಂದು ಕೊಪ್ಪಳ ಜೆಸ್ಕಾಂ ಕಾರ್ಯ ಮತ್ತು ಪಾಲನಾ ವೃತ್ತ ಕಚೇರಿಯ ಅಧೀಕ್ಷಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮಾಂತರ ಛಾಯಾಗ್ರಾಹಕರ ಮೂರು ದಿನಗಳ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ



ರಾಯಚೂರು: ನಗರದ ಜಿಲ್ಲಾ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ರಾಯಚೂರು ಗ್ರಾಮಾಂತರ ಛಾಯಾಗ್ರಾಹಕರ ವತಿಯಿಂದ ಆಯೋಜಿಸಿರುವ ಮೂರು ದಿನಗಳ ಕ್ರಿಕೆಟ್ ಪಂದ್ಯಾವಳಿಗೆ ಶುಕ್ರವಾರ ಸಂಭ್ರಮದಿಂದ ಚಾಲನೆ ನೀಡಲಾಯಿತು.

ನಗರಾಧ್ಯಕ್ಷ ಅಕ್ಬರ್ ಪಾಷಾ ಅಧ್ಯಕ್ಷತೆಯಲ್ಲಿ, ಶಂಕರ ಪಾಟೀಲ, ಜಗದೀಶ, ವೀರೇಶ, ಗಜೇಂದ್ರ ಹಾಗೂ ಮೌಲಾಲಿ ಅವರ ನೇತೃತ್ವದಲ್ಲಿ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ. ಜೆಡಿಎಸ್ ಯುವ ಘಟಕದ ಜಿಲ್ಲಾಧ್ಯಕ್ಷ ವಿಜಯಗೌಡ ಅವರು ಪಂದ್ಯಾವಳಿಯನ್ನು ಉದ್ಘಾಟಿಸಿ, ವೇದಿಕೆಯಲ್ಲಿ ಕ್ರಿಕೆಟ್ ಕಪ್‌ಗಳನ್ನು ಅನಾವರಣಗೊಳಿಸಿದರು. ಬಳಿಕ ಮೈದಾನದಲ್ಲಿ ರಿಬ್ಬನ್ ಕತ್ತರಿಸಿ ಬ್ಯಾಟ್ ಬೀಸುವ ಮೂಲಕ ಪಂದ್ಯಗಳಿಗೆ ಚಾಲನೆ ನೀಡಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ರಾಜ್ಯ ಕಾಂಗ್ರೆಸ್ ಸೇವಾದಳದ ಕಾರ್ಯದರ್ಶಿ ಪಿ. ರಾಧಾಕೃಷ್ಣರೆಡ್ಡಿ, ಸಾಯಿ ಇಂಡಸ್ಟ್ರೀಸ್‌ನ ಕೆ. ವಿಕ್ರಂ, ಡಿ. ರಾಂಪೂರ, ಕೊರ್ತಕುಂದ ಗ್ರಾಮ ಪಂಚಾಯಿತಿ ಸದಸ್ಯ ತಿಮ್ಮಪ್ಪ, ಎ. ಧರ್ಮರೆಡ್ಡಿ ಆರ್.ಪಿ., ಹಿರಿಯ ಛಾಯಾಗ್ರಾಹಕರಾದ ತಾರಾ ಪ್ರಕಾಶ, ಶ್ರೀನಿವಾಸ ಇನಾಮದಾರ, ಹರೀಶ ಜಾದವ ವಜ್ರ, ಎನ್. ನರಸಪ್ಪ, ಮುದೀರ ಪಾಷಾ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಪಂದ್ಯಾವಳಿಯ ಅಧ್ಯಕ್ಷತೆ ವಹಿಸಿದ್ದ ಅಕ್ಬರ್ ಪಾಷಾ ಮಾತನಾಡಿ, ನಿತ್ಯ ವಿವಿಧ ಕಾರ್ಯಕ್ರಮಗಳ ಛಾಯಾಗ್ರಹಣಕ್ಕಾಗಿ ನಿರಂತರವಾಗಿ ಓಡಾಡುವ ಛಾಯಾಗ್ರಾಹಕರಿಗೆ ಕ್ರೀಡಾ ಚಟುವಟಿಕೆಗಳು ಅತ್ಯಂತ ಅವಶ್ಯಕವಾಗಿವೆ. ಕ್ರೀಡೆಗಳಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಯಾಗುವುದರ ಜೊತೆಗೆ ಜಿಲ್ಲೆ, ತಾಲೂಕು ಹಾಗೂ ಗ್ರಾಮೀಣ ಭಾಗದ ಛಾಯಾಗ್ರಾಹಕರ ನಡುವೆ ಪರಸ್ಪರ ಪರಿಚಯ ಮತ್ತು ಬಾಂಧವ್ಯ ಬೆಳೆಸಲು ಸಹಕಾರಿಯಾಗುತ್ತದೆ. ವೃತ್ತಿಪರ ಸಂಪರ್ಕ ವಿಸ್ತರಣೆಯ ಮೂಲಕ ವ್ಯವಹಾರಕ್ಕೂ ಅನುಕೂಲವಾಗುತ್ತದೆ ಎಂದು ಹೇಳಿದರು.

ಛಾಯಾಗ್ರಾಹಕ ಹಾಗೂ ವಕೀಲ ವೀರಪ್ರಕಾಶ ಮಾತನಾಡಿ, ಕ್ರೀಡೆಯಲ್ಲಿ ಸೋಲು-ಗೆಲುವು ಸಹಜವಾಗಿದ್ದು, ಎರಡನ್ನೂ ಸಮಾನ ಮನೋಭಾವದಿಂದ ಸ್ವೀಕರಿಸಬೇಕು. ಗೆಲುವಿಗಿಂತ ಪಂದ್ಯಾವಳಿಯಲ್ಲಿ ಕ್ರೀಡಾಸ್ಫೂರ್ತಿಯಿಂದ ಭಾಗವಹಿಸುವುದು ಮುಖ್ಯ ಎಂದು ಹೇಳಿದರು.

ಹಿರಿಯ ಪತ್ರಿಕಾ ಛಾಯಾಗ್ರಾಹಕ ಶ್ರೀನಿವಾಸ ಇನಾಮದಾರ ಮಾತನಾಡಿ, ತಂತ್ರಜ್ಞಾನದ ಬೆಳವಣಿಗೆಯಿಂದ ಡಿಜಿಟಲ್ ಕ್ಯಾಮೆರಾಗಳು ಹಾಗೂ ಹೈಡೆಫಿನಿಷನ್ ಮೊಬೈಲ್‌ಗಳು ವ್ಯಾಪಕವಾಗಿರುವ ಹಿನ್ನೆಲೆಯಲ್ಲಿ ವೃತ್ತಿಪರ ಛಾಯಾಗ್ರಾಹಕರು ಹಲವು ಸವಾಲುಗಳನ್ನು ಎದುರಿಸುತ್ತಿದ್ದಾರೆ. ಅನೇಕ ಸಂಕಷ್ಟಗಳ ನಡುವೆಯೂ ಛಾಯಾಗ್ರಾಹಕರು ತಮ್ಮ ವೃತ್ತಿಯನ್ನು ಮುಂದುವರಿಸಿಕೊಂಡು ಕುಟುಂಬ ನಿರ್ವಹಣೆ ಮಾಡುತ್ತಿದ್ದಾರೆ. ಹಲವು ವರ್ಷಗಳ ಹೋರಾಟದ ಬಳಿಕ ಸರ್ಕಾರದಿಂದ ಅಸಂಘಟಿತ ಕಾರ್ಮಿಕರ ಗುರುತಿನ ಚೀಟಿ ದೊರೆತಿರುವುದು ಮಹತ್ವದ ಬೆಳವಣಿಗೆಯಾಗಿದೆ ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿಯೂ ಕ್ರಿಕೆಟ್ ಪ್ರಮುಖ ಕ್ರೀಡೆಯಾಗಿ ಬೆಳೆದಿದೆ. ಪಂದ್ಯಾವಳಿಯಲ್ಲಿ ಭಾಗವಹಿಸುವ ಎಲ್ಲ ಛಾಯಾಗ್ರಾಹಕರು ಸಹೋದರತ್ವ ಹಾಗೂ ಸೌಹಾರ್ದತೆಯಿಂದ ಆಟವಾಡಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ ಕ್ರೀಡಾಸ್ಫೂರ್ತಿಯನ್ನು ಮೆರೆಯಬೇಕು. ಇಂತಹ ಪಂದ್ಯಾವಳಿಗಳು ಪರಸ್ಪರ ಪರಿಚಯ ಬೆಳೆಸುವುದರೊಂದಿಗೆ ವೃತ್ತಿಪರ ಸಂಪರ್ಕ ವಿಸ್ತರಣೆಗೆ ಸಹಕಾರಿಯಾಗುತ್ತವೆ ಎಂದರು.

ಒಟ್ಟು 10 ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸಿದ್ದು, ತಲಾ 8 ಓವರ್‌ಗಳ ಪಂದ್ಯಗಳು ನಡೆಯಲಿವೆ. ಮೂರು ದಿನಗಳ ಕಾಲ ನಡೆಯುವ ಪಂದ್ಯಾವಳಿಯಲ್ಲಿ ನಗರದ ಹಾಗೂ ಗ್ರಾಮೀಣ ಭಾಗದ ಛಾಯಾಗ್ರಾಹಕರು ತಮ್ಮ ಕ್ರಿಕೆಟ್ ಪ್ರತಿಭೆಯನ್ನು ಪ್ರದರ್ಶಿಸಲಿದ್ದಾರೆ.

ಈ ಸಂದರ್ಭದಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಹಿರಿಯ ಮತ್ತು ಕಿರಿಯ ಛಾಯಾಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K